ದಾವಣಗೆರೆಯಿಂದ

# ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ
Editor : RAVIKUMARA J.O.

MUNJANEYA MERAGU

ಕನ್ನಡ ದಿನಪತ್ರಿಕೆ
Kannada Daily

Davangere Volume :1 Issue: 81 Thursday 17-09-2026 PRGI. NO. KNKAN/26/A4616, Mob:- 8880222429 Page : 4 Price : 2-00/-
ದಾವಣಗೆರೆ ಸಂಪುಟ : 1 ಸಂಚಿಕೆ : 81 ಗುರುವಾರ Email: munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

# ಮಳೆಗಾಲದಲ್ಲೇ ಕಲ್ಲಂಗಡಿ ಹಣ್ಣಿನ ಹವಾ!

## ಮಳೆ ಕೈಕೊಟ್ಟು ಬಿಸಿಲಿನ ತಾಪ ಹೆಚ್ಚಳ; ಕಲ್ಲಂಗಡಿ, ಎಳನೀರು, ಕಬ್ಬಿನಹಾಲು, ಮಜ್ಜಿಗೆ ಮೊರೆ ಹೋದ ಜನತೆ

**"ಮುಂಜಾನೆಯ ಮೆರಗು"**

**ಜಗಳೂರು, ಸೆ.16–** ಸಾಮಾನ್ಯವಾಗಿ ಬೇಸಿಗೆಯ ದಿನಗಳಲ್ಲಿ ಹೆಚ್ಚು ಬೇಡಿಕೆ ಪಡೆಯುವ ಕಲ್ಲಂಗಡಿ ಹಣ್ಣು, ಇದೀಗ ಮಳೆಗಾಲದಲ್ಲಿಯೇ ಜಗಳೂರು ಪಟ್ಟಣದ ಮಾರುಕಟ್ಟೆ ಹಾಗೂ ರಸ್ತೆ ಬದಿಗಳಲ್ಲಿ ತನ್ನ ಹವಾ ಆರಂಭಿಸಿದೆ. ಮುಂಗಾರು ಮಳೆ ನಿರೀಕ್ಷಿತ ಪ್ರಮಾಣದಲ್ಲಿ ಸು–ರಿಯದ ಪರಿಣಾಮ ಬಿಸಿಲಿನ ತಾಪ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ದೇಹವನ್ನು ತಂಪಾಗಿಸಿಕೊಳ್ಳಲು ಸಾರ್ವಜನಿಕರು ಕಲ್ಲಂಗಡಿ, ಎಳನೀರು, ಕಬ್ಬಿನಹಾಲು ಹಾಗೂ ಮಜ್ಜಿಗೆಯ ಮೊರೆ ಹೋಗುತ್ತಿದ್ದಾರೆ.

ಮಳೆಗಾಲದ ಸಿಂಚನದಿಂದ ತಂಪಾಗಬೇಕಿದ್ದ ಭೂಮಿ ಇದೀಗ ಬಿಸಿಲಿನ ತಾಪಕ್ಕೆ ಬಿಸಿಯಾಗುತ್ತಿದೆ. ಸೆಪ್ಟೆಂಬರ್‌ನಲ್ಲಿ ಸಾಮಾನ್ಯವಾಗಿ ಮಳೆಯ ವಾತಾವರಣ ಕಂಡುಬರಬೇಕಾದ ಸಂದರ್ಭದಲ್ಲಿ ಜಗಳೂರು ತಾಲೂಕಿನಲ್ಲಿ ಬಿಸಿಲಿನ ಪ್ರಖರತೆ ಜನರನ್ನು ತಲ್ಲಣಗೊಳಿಸುತ್ತಿದೆ. ಮಧ್ಯಾಹ್ನದ ವೇಳೆಯಲ್ಲಿ ಹೊರಗೆ ಸಂಚರಿಸುವುದೇ ಕಷ್ಟಕರವಾಗಿದ್ದು, ಬಿಸಿಲಿನ ಝಳದಿಂದ ತಪ್ಪಿಸಿಕೊಳ್ಳಲು ಜನರು ನೆರಳಿನ ಆಸರೆ ಪಡೆಯುವಂತಾಗಿದೆ.

**ಮಳೆಯ ಬದಲು ಬಿಸಿಲಿನ ರುದ್ರನರ್ತನ**

ಮಳೆ ಬಂದಾಗ ಕೊಡೆ ಹಿಡಿದು ಓಡಾಡುತ್ತಿದ್ದ ಜನರು, ಇದೀಗ ಮಳೆ ಕೊರತೆಯಿಂದ ಬೀಸುವ ಬಿರು ಬಿಸಿಲಿನಿಂದ ರಕ್ಷಿಸಿಕೊಳ್ಳಲು ನೆರಳಿನ ಮೊರೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಮನೆಗಳಲ್ಲಿಯೂ ಫ್ಯಾನ್ ಇಲ್ಲದೆ ಇರಲು ಕಷ್ಟವಾಗುತ್ತಿದೆ. ಉಷ್ಣಾಂಶದ ಏರಿಕೆ ಜನರ ದೈನಂದಿನ ಜೀವನದ ಮೇಲೂ ಪರಿಣಾಮ ಬೀರುತ್ತಿದ್ದು, ಮಧ್ಯಾಹ್ನದ ಸಮಯದಲ್ಲಿ ರಸ್ತೆಗಳು ಸಹ ಬಿಕೋ ಎನ್ನುತ್ತಿರುವ ದೃಶ್ಯ ಕಂಡುಬರುತ್ತಿದೆ.



"ಮಳೆಗಾಲದಲ್ಲಿ ಇಂತಹ ಬಿಸಿಲು ಹಿಂದೆಂದೂ ಕಂಡಿರಲಿಲ್ಲ. ಬೆಳಗ್ಗೆಯಿಂದಲೇ ಬಿಸಿಲಿನ ತಾಪ ಹೆಚ್ಚಾಗುತ್ತಿದೆ. ಹೊರಗೆ ಹೋದಾಗ ದೇಹ ದಣಿಯುತ್ತಿದೆ" ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

**ಕಲ್ಲಂಗಡಿಗೆ ಬೇಡಿಕೆ ಹೆಚ್ಚಳ**

ಸಾಮಾನ್ಯವಾಗಿ ಕಲ್ಲಂಗಡಿ ಹಣ್ಣು ಫೆಬ್ರವರಿಯಿಂದ ಮೇ ತಿಂಗಳವರೆಗೆ ಹೆಚ್ಚಿನ ಪ್ರಮಾಣದಲ್ಲಿ ಮಾರುಕಟ್ಟೆಗೆ ಬರುತ್ತದೆ. ಆದರೆ ಈ ಬಾರಿ ಮಳೆಗಾಲದಲ್ಲಿಯೇ ಕಲ್ಲಂಗಡಿ ಹಣ್ಣುಗಳು ಮಾರುಕಟ್ಟೆಗೆ ಲಗ್ಗೆ ಇಟ್ಟಿವೆ. ಗಾತ್ರದಲ್ಲಿ ಚಿಕ್ಕದಾಗಿರುವ ಕಲ್ಲಂಗಡಿಗಳು ರಸ್ತೆ ಬದಿಯ ವ್ಯಾಪಾರಸ್ಥರ ಬಳಿ ಹೆಚ್ಚಾಗಿ ಕಂಡುಬರುತ್ತಿದ್ದು, ಬಿಸಿಲಿನ ತಾಪದಿಂದ ದಣಿದ ಜನರು ಕಲ್ಲಂಗಡಿ ಹಣ್ಣಿನತ್ತ ಮುಖ ಮಾಡುತ್ತಿದ್ದಾರೆ.

ಬಳ್ಳಾರಿ, ವಿಜಯನಗರ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಕಲ್ಲಂಗಡಿ ಹಣ್ಣುಗಳು ಜಗಳೂರಿಗೆ ಬರುತ್ತಿವೆ. ಬೇಸಿಗೆಯ ಅವಧಿಗೆ ಹೋಲಿಸಿದರೆ ಮಳೆಗಾಲದಲ್ಲಿಯೂ ಕಲ್ಲಂಗಡಿಗೆ ಬೇಡಿಕೆ ಕಂಡುಬರುತ್ತಿರುವುದು ವ್ಯಾಪಾರಸ್ಥರ ಗಮನ ಸೆಳೆದಿದೆ.

**ರೈತರ ಪಾಲಿಗೆ ಮಳೆ ಕೊರತೆ, ಬಿಸಿಲು ಮತ್ತೊಂದು ಹೊಡೆತ**

ಒಂದೆಡೆ ಮಳೆ ಕೊರತೆಯಿಂದ ತಾಲೂಕಿನ ಕೃಷಿ ಚಟುವಟಿಕೆಗಳು ಸಂಕಷ್ಟಕ್ಕೆ ಸಿಲುಕಿದ್ದರೆ, ಮತ್ತೊಂದೆಡೆ ಹೆಚ್ಚುತ್ತಿರುವ ಬಿಸಿಲಿನ ತಾಪ ರೈತರ ಆತಂಕವನ್ನು ಮತ್ತಷ್ಟು ಹೆಚ್ಚಿಸಿದೆ.

ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡಿದ್ದ ಮೆಕ್ಕೆಜೋಳದ ಬೆಳೆ ಹಲವು ಪ್ರದೇಶಗಳಲ್ಲಿ ಮಳೆ ಕೊರತೆಯಿಂದ ಒಣಗುವ ಹಂತ ತಲುಪಿದೆ. ಬಿತ್ತನೆ ಮಾಡಿದ ಬೆಳೆ ಕೈಗೆ ಸಿಗುತ್ತದೆಯೇ ಎಂಬ ಆತಂಕ ರೈತರನ್ನು ಕಾಡುತ್ತಿದೆ. ಈಗಾಗಲೇ ಮಳೆಗಾಗಿ ಕಾಯುತ್ತಿರುವ ರೈತಾಪಿ ವರ್ಗ, ಉಳಿದಿರುವ ರಾಗಿ ಬೆಳೆಯಾದರೂ ಮಳೆಯ ನೆರವಿನಿಂದ ಉಳಿಯಲಿ ಎಂದು ದೇವರ ಮೊರೆ ಹೋಗುವಂತಾಗಿದೆ.

**ಸೆಪ್ಟೆಂಬರ್‌ನಲ್ಲೇ ಇಂತಹ ಬಿಸಿಲಾದರೆ ಮುಂದೆ?**



ಸೆಪ್ಟೆಂಬರ್ ತಿಂಗಳಲ್ಲಿಯೇ ಬಿಸಿಲಿನ ಪ್ರಖರತೆ ಈ ಮಟ್ಟಿಗೆ ಹೆಚ್ಚಾಗಿರುವುದು ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ. ಮುಂದಿನ ದಿನಗಳಲ್ಲಿ ಮಳೆ ಪರಿಸ್ಥಿತಿ ಹೇಗಿರಲಿದೆ? ಉಷ್ಣಾಂಶ ಇನ್ನಷ್ಟು ಏರಿಕೆಯಾಗಲಿದೆಯೇ? ಎಂಬ ಪ್ರಶ್ನೆಗಳು ಜನರನ್ನು ಕಾಡುತ್ತಿವೆ.

ಮಳೆ ಕೊರತೆಯ ಪರಿಣಾಮ ಕೃಷಿ ಕ್ಷೇತ್ರದ ಮೇಲೆ ನೇರವಾಗಿ ಬೀಳುತ್ತಿರುವ ಸಂದರ್ಭದಲ್ಲಿ, ಬಿಸಿಲಿನ ತಾಪಮಾನ ಏರಿಕೆಯಿಂದ ಜನಜೀವನವೂ ಅಸ್ತವ್ಯಸ್ತಗೊಳ್ಳುವ ಹಂತಕ್ಕೆ ತಲುಪಿದೆ. ಮಳೆಗಾಗಿ ರೈತರು ಆಕಾಶದತ್ತ ಮುಖ ಮಾಡುತ್ತಿದ್ದರೆ, ಬಿಸಿಲಿನ ಝಳದಿಂದ ತಪ್ಪಿಸಿಕೊಳ್ಳಲು ಸಾರ್ವಜನಿಕರು ಕಲ್ಲಂಗಡಿ, ಎಳನೀರು, ಕಬ್ಬಿನಹಾಲು ಮತ್ತು ಮಜ್ಜಿಗೆಯ ಮೊರೆ ಹೋಗುತ್ತಿದ್ದಾರೆ.

ಮಳೆಗಾಲದಲ್ಲೇ ಬೇಸಿಗೆಯ ವಾತಾವರಣ ನಿರ್ಮಾಣವಾಗಿರುವುದು ಜಗಳೂರು ತಾಲೂಕಿನ ಹವಾಮಾನ ವೈಪರೀತ್ಯದ ಸಂಕೇತವೇ? ಎಂಬ ಚರ್ಚೆಯೂ ಇದೀಗ ಸಾರ್ವಜನಿಕ ವಲಯದಲ್ಲಿ ಆರಂಭವಾಗಿದೆ.

# ಮೂರನೇ ದಿನ 98 ಗಣೇಶಮೂರ್ತಿಗಳ ವಿಸರ್ಜನೆ



**"ಮುಂಜಾನೆಯ ಮೆರಗು"**

**ಜಗಳೂರು ಸೆ, 16–** ಜಗಳೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬುಧವಾರ ಮೂರನೇ ದಿನವೂ ಗಣೇಶ ಮೂರ್ತಿಗಳ ವಿಸರ್ಜನಾ ಕಾರ್ಯ ನಡೆಯಿತು. ವಿವಿಧ ಬಡಾವಣೆಗಳು ಹಾಗೂ ಗ್ರಾಮಗಳಲ್ಲಿ ಪ್ರತಿಷ್ಠಾಪಿಸಲಾಗಿದ್ದ ಸುಮಾರು 98 ಗಣೇಶ ಮೂರ್ತಿಗಳನ್ನು ಸಂಜೆ ವೇಳೆ ವಿಸರ್ಜಿಸಲಾಯಿತು.

ಸಂಜೆಯಿಂದ ಆರಂಭವಾದ ವಿಸರ್ಜನಾ ಮೆರವಣಿಗೆ ವೇಳೆ ಡಿಜೆ ಬಳಕೆಗೆ ನಿರ್ಬಂಧವಿದ್ದ ಹಿನ್ನೆಲೆಯಲ್ಲಿ ಡ್ರಮ್‌ಸೆಟ್‌ಗಳ ಶಬ್ದದೊಂದಿಗೆ ಭಕ್ತರು ಗಣೇಶ ಮೂರ್ತಿಗಳನ್ನು ಮೆರವಣಿಗೆಯಲ್ಲಿ ಕೊಂಡೊಯ್ದು ವಿಸರ್ಜನೆ ನೆರವೇರಿಸಿದರು.

ಪಟ್ಟಣದ ಕೆರೆ ಹಾಗೂ ಕೊಟ್ಟೂರು ರಸ್ತೆ ಪಕ್ಕದ ಸ್ಥಳದಲ್ಲಿ ಗಣೇಶ ಮೂರ್ತಿಗಳ ವಿಸರ್ಜನೆಗೆ ವ್ಯವಸ್ಥೆ ಕಲ್ಪಿಸಲಾಗಿತ್ತು. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸ್ ಇಲಾಖೆ ಮುನ್ನೆಚ್ಚರಿಕೆ ಕ್ರಮವಾಗಿ ಬಿಗಿ ಬಂದೋಬಸ್ತ್ ವ್ಯವಸ್ಥೆ ಮಾಡಿತ್ತು.

ಸಿಪಿಐ ಸಿದ್ರಾಮಯ್ಯ ಅವರ ನೇತೃತ್ವದಲ್ಲಿ ಪೊಲೀಸ್ ಸಿಬ್ಬಂದಿ ಕರ್ತವ್ಯ ನಿರ್ವಹಿಸಿ, ವಿಸರ್ಜನಾ ಮೆರವಣಿಗೆ ಸುಗಮವಾಗಿ ನಡೆಯುವಂತೆ ಅಗತ್ಯ ಭದ್ರತಾ ಕ್ರಮಗಳನ್ನು ಕೈಗೊಂಡಿದ್ದರು

# ಆಧಾರ್ ಕೇಂದ್ರದ ಮುಂದೆ ಮುಂದುವರಿದ ಸರದಿ ಸಾಲು! ಚಪ್ಪಲಿ, ಚೀಲ, ನೀರಿನ ಬಾಟಲಿಗಳೇ ಟೋಕನ್!

**"ಮುಂಜಾನೆಯ ಮೆರಗು"**

**ಜಗಳೂರು ಸೆ, 16–** ತಾಲೂಕು ಕಚೇರಿ ಆವರಣದಲ್ಲಿರುವ ಆಧಾರ್ ಕೇಂದ್ರದ ಮುಂದೆ ಕಳೆದೊಂದು ವಾರದಿಂದಲೂ ಸಾರ್ವಜನಿಕರ ಸರದಿ ಸಾಲು ಮುಂದುವರಿದಿದ್ದು, ಆಧಾರ್ ತಿದ್ದುಪಡಿ, ವಿವರಗಳ ನವೀಕರಣ ಸೇರಿದಂತೆ ವಿವಿಧ ಸೇವೆಗಳನ್ನು ಪಡೆಯಲು ಜನರು ಗಂಟೆಗಟ್ಟಲೆ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ.

ಪ್ರತಿದಿನ ಬೆಳಗ್ಗೆಯಿಂದಲೇ ಆಧಾರ್ ಕೇಂದ್ರದ ಮುಂಭಾಗದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸುತ್ತಿದ್ದು, ಕೇಂದ್ರದ ಸಾಮರ್ಥ್ಯಕ್ಕೆ ಹೋಲಿಸಿದರೆ ಸೇವೆ ಪಡೆಯಲು ಆಗಮಿಸುವವರ ಸಂ–ಖ್ಯೆ ಹೆಚ್ಚಾಗಿರುವುದರಿಂದ ಜನದಟ್ಟಣೆ ಕಂಡುಬರುತ್ತಿದೆ. ಸರದಿ ಸಾಲಿನಲ್ಲಿ ತಮ್ಮ ಸ್ಥಾನವನ್ನು ಕಾಯ್ದುಕೊಳ್ಳಲು ಕೆಲವರು ಚಪ್ಪಲಿ, ಟವೆಲ್, ಚೀಲ, ನೀರಿನ ಬಾಟಲ್ ಸೇರಿದಂತೆ ವಿವಿಧ ವಸ್ತುಗಳನ್ನು ಇಟ್ಟು ಸ್ಥಳ ಕಾಯ್ದಿರಿಸುವ ದೃಶ್ಯ ಸಾಮಾನ್ಯವಾಗಿದೆ.

**ಬಿಸಿಲಿನ ತಾಪಕ್ಕೆ ಸಾರ್ವಜನಿಕರ ಪರದಾಟ**

ಆಧಾರ್ ಕೇಂದ್ರದ ಮುಂದೆ ಸೂಕ್ತ ನೆರಳಿನ ವ್ಯವಸ್ಥೆ ಇಲ್ಲದ ಕಾರಣ ಬಿಸಿಲಿನ ತಾಪದಲ್ಲಿ ವೃದ್ಧರು, ಮಹಿಳೆಯರು ಹಾಗೂ ದೂರದ ಗ್ರಾಮಗಳಿಂದ ಆಗಮಿಸಿರುವ ಸಾರ್ವಜನಿಕರು ಹೆಚ್ಚಿನ ತೊಂದ–ರೆ ಅನುಭವಿಸುತ್ತಿದ್ದಾರೆ. ಗಂಟೆಗಟ್ಟಲೆ ಸರದಿಯಲ್ಲಿ ನಿಂತು ಸೇವೆ ಪಡೆಯಬೇಕಾದ ಪರಿಸ್ಥಿತಿ ಉಂಟಾಗಿದ್ದು, ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಲಭ್ಯಗಳ ಅಗತ್ಯವಿದೆ ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.





ಆಧಾರ್‌ನಲ್ಲಿನ ಸಣ್ಣಪುಟ್ಟ ತಿದ್ದುಪಡಿಗಳಿಂದ ಹಿಡಿದು ಮೊಬೈಲ್ ಸಂಖ್ಯೆ, ವಿಳಾಸ ಸೇರಿದಂತೆ ವಿವಿಧ ವಿವರಗಳನ್ನು ನವೀಕರಿಸಿಕೊಳ್ಳಲು ಜನರು ತಾಲೂಕು ಕೇಂದ್ರಕ್ಕೆ ಆಗಮಿಸುತ್ತಿದ್ದಾರೆ. ಆದರೆ ಸೇವೆ ಪಡೆಯಲು ಹೆಚ್ಚು ಸಮಯ ಕಾಯಬೇಕಾಗುತ್ತಿರುವುದರಿಂದ ಸಾರ್ವಜನಿಕರಲ್ಲಿ ಅಸಮಾಧಾನ ವ್ಯಕ್ತವಾಗುತ್ತಿದೆ.

**ಹೆಚ್ಚುವರಿ ಕೇಂದ್ರಗಳಿದ್ದರೂ ಪ್ರಯೋಜನವೇನು?**

ಜಗಳೂರು ಪಟ್ಟಣದಲ್ಲಿ ಬಿಎಸ್‌ಎನ್‌ಎಲ್ ಹಾಗೂ ಅಂಚೆ ಕಚೇರಿ ಸೇರಿದಂತೆ ವಿವಿಧ ಕಡೆಗಳಲ್ಲಿ ಆಧಾರ್ ಸೇವಾ ಕೇಂದ್ರಗಳ ವ್ಯವಸ್ಥೆ ಇದ್ದರೂ, ಅವುಗಳನ್ನು ಸಮರ್ಪಕವಾಗಿ ಬಳಸಿಕೊಳ್ಳದಿರುವುದರಿಂದ ತಾಲೂಕು ಕಚೇರಿ ಆವರಣದಲ್ಲಿರುವ ಕೇಂದ್ರದ ಮೇಲೆಯೇ ಹೆಚ್ಚಿನ ಒತ್ತಡ ಬೀಳುತ್ತಿದೆ ಎಂಬ ಆರೋಪ ಸಾರ್ವಜನಿಕರಿಂದ ಕೇಳಿಬರುತ್ತಿದೆ.

ಎಲ್ಲಾ ಕೇಂದ್ರಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಕ್ರಮ ಕೈಗೊಂಡು, ಅಗತ್ಯವಿದ್ದಲ್ಲಿ ಹೆಚ್ಚುವರಿ ಸಿಬ್ಬಂದಿ ಹಾಗೂ ಯಂತ್ರೋಪಕರಣಗಳನ್ನು ಒದಗಿಸಬೇಕು. ಗ್ರಾಮೀಣ ಭಾಗದಿಂದ ಬರುವ ಸಾರ್ವಜನಿಕರು ಒಂದೇ ಕೇಂದ್ರದ ಮುಂದೆ ದಿನವಿಡೀ ಕಾಯುವ ಪರಿಸ್ಥಿತಿ ತಪ್ಪಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

**ಸಾರ್ವಜನಿಕರ ಒತ್ತಾಯ**

ಆಧಾರ್ ಕೇಂದ್ರದಲ್ಲಿ ಹೆಚ್ಚುವರಿ ಸಿಬ್ಬಂದಿ ನಿಯೋಜಿಸುವುದು, ಸೇವಾ ಸಾಮರ್ಥ್ಯ ಹೆಚ್ಚಿಸುವುದು, ಟೋಕನ್ ವ್ಯವಸ್ಥೆ ಜಾರಿಗೊಳಿಸುವುದು ಹಾಗೂ ಇತರೆ ಲಭ್ಯವಿರುವ ಕೇಂದ್ರಗಳನ್ನು ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಮಾಡಬೇಕು. ವಿಶೇಷವಾಗಿ ವೃದ್ಧರು, ಅಂಗವಿಕಲರು ಹಾಗೂ ಮಹಿಳೆಯರಿಗೆ ಆದ್ಯತೆ ನೀಡುವ ವ್ಯವಸ್ಥೆ ಕಲ್ಪಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಒಂದೆಡೆ ಸರ್ಕಾರದ ವಿವಿಧ ಯೋಜನೆಗಳು ಹಾಗೂ ಸೇವೆಗಳಿಗೆ ಆಧಾರ್ ಅವಶ್ಯಕವಾಗುತ್ತಿರುವ ಸಂದರ್ಭದಲ್ಲಿ, ಮತ್ತೊಂದೆಡೆ ಆಧಾರ್ ಸೇವೆ ಪಡೆಯಲು ಜನರು ಗಂಟೆಗಟ್ಟಲೆ ಸರದಿಯಲ್ಲಿ ನಿಲ್ಲಬೇಕಾದ ಪರಿಸ್ಥಿತಿ ನಿರ್ಮಾಣವಾಗಿರುವುದು ಸಾರ್ವಜನಿಕರ ಸಂಕಷ್ಟವನ್ನು ಮತ್ತಷ್ಟು ಹೆಚ್ಚಿಸಿದೆ.

# ವಿಘ್ನಗಳ ನಿವಾರಕ ಗಣೇಶನಿಗೆ ಭಕ್ತಿಯಿಂದ ಪೂಜೆ ಸಲ್ಲಿಸಿ: ಶಾಸಕ ಬಿ. ದೇವೇಂದ್ರಪ್ಪ

**"ಮುಂಜಾನೆಯ ಮೆರಗು"**

**ಜಗಳೂರು ಸೆ, 16–** ಇಡೀ ಭೂಮಂಡಲದಲ್ಲಿಯೇ ವಿಘ್ನಗಳ ನಿವಾರಕನಾದ ಗಣೇಶನಿಗೆ ವಿಶಿಷ್ಟವಾದ ಸ್ಥಾನಮಾನವಿದೆ. ಯಾವುದೇ ಶುಭಕಾರ್ಯ, ಹೊಸ ಕೆಲಸ ಅಥವಾ ಕಾರ್ಯಕ್ರಮವನ್ನು ಆರಂಭಿಸುವ ಮುನ್ನ ಗಣೇಶನನ್ನು ಸ್ಮರಿಸಿ ಪೂಜೆ ಸಲ್ಲಿಸುವುದು ನಮ್ಮ ಸಂಪ್ರದಾಯವಾಗಿದ್ದು, ಗಣೇಶನ ಆರಾಧನೆಯಿಂದ ವಿಘ್ನಗಳು ನಿವಾರಣೆಯಾಗುತ್ತವೆ ಎಂಬ ನಂಬಿಕೆ ಜನರಲ್ಲಿದೆ ಎಂದು ಶಾಸಕ ಬಿ. ದೇವೇಂದ್ರಪ್ಪ ಹೇಳಿದರು.

ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿರುವ ಬೆಸ್ಕಾಂ ಕಚೇರಿ ಬಳಗದ ವತಿಯಿಂದ ಪ್ರತಿಷ್ಠಾಪಿಸಲಾಗಿರುವ ಗಣೇಶ ಮೂರ್ತಿಯ ದರ್ಶನ ಪಡೆದು ಮಾತನಾಡಿದ ಅವರು, ಗಣೇಶನ ಆರಾಧನೆಗೆ ನಮ್ಮ ಸಮಾಜದಲ್ಲಿ ಬಹಳ ಹಿಂದಿನಿಂದಲೂ ಮಹತ್ವವಿದೆ. ಪ್ರತಿಯೊಂದು ಕಾರ್ಯವೂ ಯಶಸ್ವಿಯಾಗಿ ನೆರವೇರಲಿ ಎಂಬ ಆಶಯದೊಂದಿಗೆ ಗಣೇಶನನ್ನು ಪೂಜಿಸಿ ಕಾರ್ಯಾರಂಭ ಮಾಡುವುದು ವಾಡಿಕೆಯಾಗಿದೆ ಎಂದರು.


ಸ್ವಾತಂತ್ರ್ಯ ಚಳವಳಿಯ ಸಂದರ್ಭದಲ್ಲಿ ಜನರನ್ನು ಒಂದೆಡೆ ಸೇರಿಸುವ ಉದ್ದೇಶದಿಂದ ಸಾರ್ವಜನಿಕ ಸ್ಥಳಗಳಲ್ಲಿ ಗಣೇಶೋತ್ಸವ ಆಚರಣೆಗೆ ಹೆಚ್ಚಿನ ಮಹತ್ವ ದೊರೆಯಿತು. ಅಂದಿನಿಂದ ಬೆಳೆದು ಬಂದಿರುವ ಈ ಆಚರಣೆ ಇಂದು ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಭಕ್ತಿ,



ಸಾಂಸ್ಕೃತಿಕ ಒಗ್ಗಟ್ಟು ಹಾಗೂ ಸಾಮಾಜಿಕ ಬಾಂಧವ್ಯವನ್ನು ಬೆಸೆಯುವ ಪ್ರಮುಖ ಹಬ್ಬವಾಗಿ ರೂಪುಗೊಂಡಿದೆ ಎಂದು ಹೇಳಿದರು.

ಗಣೇಶೋತ್ಸವವನ್ನು ಕೇವಲ ಧಾರ್ಮಿಕ ಆಚರಣೆಗೆ ಸೀಮಿತಗೊಳಿಸದೆ, ಸಮಾಜದಲ್ಲಿ ಸೌಹಾರ್ದತೆ, ಶಿಸ್ತು, ಸ್ವಚ್ಛತೆ ಹಾಗೂ ಪರಸ್ಪರ ಸಹಕಾರದ ಸಂದೇಶವನ್ನು ಸಾರುವಂತೆ ಆಚರಿಸಬೇಕು. ಹಬ್ಬದ ಸಂದರ್ಭದಲ್ಲಿ ಪರಿಸರ ಸಂರಕ್ಷಣೆ ಹಾಗೂ ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಮಕ್ಕಳ ಭವಿಷ್ಯದ ಬಗ್ಗೆ ಪೋಷಕರು ಹೆಚ್ಚಿನ ಕಾಳಜಿ ವಹಿಸಬೇಕು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರ



ಜೊತೆಗೆ ಉತ್ತಮ ಸಂಸ್ಕಾರ, ಶಿಸ್ತು ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವ ವಾತಾವರಣ ಕಲ್ಪಿಸಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಬೆಸ್ಕಾಂ ಎಇಇ ಮಲ್ಲಿಕಾರ್ಜುನ್ ಮಾತನಾಡಿದರು. ಬೆಸ್ಕಾಂ ಇಲಾಖೆಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

Editor, Publisher & Owner of the News Paper: RAVIKUMARA J.O, MUNJANEYA MERAGU, JCR BADAVANE, Jagalur- 577-528, Davanagere (D)Karnataka, Printed by: MALLIKARJUNAPPA H G. Printed at: SHIVA MEDIA HOUSE, No.900/A2, Opp-Banashankari Temple Arch, Main Roan, Davanagere, Karnataka-577004.

# ಕೆರೆ ಅಭಿವೃದ್ಧಿ ಕಾಮಗಾರಿಗೆ ಜಿಪಂ ಸಿಇಒ ಭೇಟಿ

## ಎನ್‌ಎಂಎಂಎಸ್ ಹಾಜರಾತಿ ಪರಿಶೀಲನೆ–ಮಾರ್ಗಸೂಚಿ ಪಾಲನೆಗೆ ಸೂಚನೆ

**"ಮುಂಜಾನೆಯ ಮೆರಗು"**

**ದಾವಣಗೆರೆ ಸೆ, 16–** ತಾಲ್ಲೂಕಿನ ಕುರ್ಕಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿ.ಬಿ–ಜಿ ರಾಮ್–ಜಿ ಯೋಜನೆಯಡಿ ಕೈಗೊಳ್ಳಲಾಗುತ್ತಿರುವ ಕೆರೆ ಅಭಿವೃದ್ಧಿ ಕಾಮಗಾರಿಗೆ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಬುಧವಾರ ಭೇಟಿ ನೀಡಿ, ಕಾಮಗಾರಿಯ ಪ್ರಗತಿ ಹಾಗೂ ಯೋಜನೆಯ ಅನುಷ್ಠಾನ ಪ್ರಕ್ರಿಯೆಯನ್ನು ಪರಿಶೀಲಿಸಿದರು.

ಕಾಮಗಾರಿ ನಡೆಯುತ್ತಿದ್ದ ಸ್ಥಳಕ್ಕೆ ಭೇಟಿ ನೀಡಿದ ಸಿಇಒ ಅವರು, ಕೆರೆಯ ಅಭಿವೃದ್ಧಿ ಕಾಮಗಾರಿಯ ವಿವಿಧ ಹಂತಗಳನ್ನು ಪರಿಶೀಲಿಸಿ, ನಿಗದಿತ ಯೋಜನಾ ಗುರಿಯಂತೆ ಕೆಲಸ ಸಾಗುತ್ತಿದೆಯೇ ಎಂಬುದರ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು. ಕಾಮಗಾರಿಯ ಗುಣಮಟ್ಟ, ಕಾರ್ಮಿಕರ ಹಾಜರಾತಿ, ಕೆಲಸದ ಸ್ವರೂಪ ಹಾಗೂ ಯೋಜನೆಯ ಮಾರ್ಗಸೂಚಿಗಳ ಅನುಷ್ಠಾನದ ಬಗ್ಗೆ ಪರಿಶೀಲನೆ ನಡೆಸಿದರು.



**ಕೂಲಿಕಾರರೊಂದಿಗೆ ನೇರ ಸಂವಾದ**

ಕಾಮಗಾರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕೂಲಿಕಾರರೊಂದಿಗೆ ಸಿಇಒ ಅವರು ನೇರವಾಗಿ ಸಂವಾದ ನಡೆಸಿ, ಕೆಲಸದ ವೇಳೆ ಎದುರಾಗುತ್ತಿರುವ ಸಮಸ್ಯೆಗಳು, ಅಗತ್ಯ ಸೌಲಭ್ಯಗಳು, ಕೂಲಿ ಪಾವತಿ ಸೇರಿದಂತೆ ಕಾಮಗಾರಿಗೆ ಸಂಬಂಧಿಸಿದ ವಿಚಾರಗಳ ಕುರಿತು ಮಾಹಿತಿ ಪಡೆದರು.

ಕೂಲಿಕಾರರು ತಿಳಿಸಿದ ಸಮಸ್ಯೆಗಳು ಹಾಗೂ ಅಗತ್ಯತೆಗಳನ್ನು ಗಮನಿಸಿ, ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಯೋಜನೆಯಡಿ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ನಿಯಮಾನುಸಾರ ಅಗತ್ಯ ಸೌಲಭ್ಯಗಳು ದೊರೆಯುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

**NMMS ಹಾಜರಾತಿ ಪರಿಶೀಲನೆ**

ಇದೇ ಸಂದರ್ಭದಲ್ಲಿ ಕಾಮಗಾರಿ ಸ್ಥಳದಲ್ಲಿ ಎನ್‌ಎಂಎಂಎಸ್ (NMMS) ಮೂಲಕ ದಾಖಲಿಸಲಾಗುತ್ತಿರುವ ಕೂಲಿಕಾರರ ಹಾಜರಾತಿಯನ್ನು ಸಿಇಒ ಅವರು ಪರಿಶೀಲಿಸಿದರು. ಸ್ಥಳದಲ್ಲಿ ವಾಸ್ತವವಾಗಿ ಹಾಜರಿರುವ ಕಾರ್ಮಿಕರ ವಿವರಗಳು ಹಾಗೂ ಡಿಜಿಟಲ್ ಹಾಜರಾತಿ ದಾಖಲಾತಿಗಳ ನಡುವೆ ಹೊಂದಾಣಿಕೆ ಇರುವುದನ್ನು ಖಚಿತಪಡಿಸಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಯೋಜನೆಯಡಿ ಕೈಗೊಳ್ಳುವ ಪ್ರತಿಯೊಂದು ಕಾಮಗಾರಿಯಲ್ಲೂ ಪಾರದರ್ಶಕತೆ ಮತ್ತು ನಿಯಮಾನುಸರಣೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಕಾಮಗಾರಿಯ ದಾಖಲೆಗಳು, ಕಾರ್ಮಿಕರ ಹಾಜರಾತಿ ಹಾಗೂ ಅನುಷ್ಠಾನ ಪ್ರಕ್ರಿಯೆಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಅವರು ನಿರ್ದೇಶನ ನೀಡಿದರು.

**ಗುಣಮಟ್ಟಕ್ಕೆ ಯಾವುದೇ ರಾಜಿ ಬೇಡ**

ಕೆರೆ ಅಭಿವೃದ್ಧಿ ಕಾಮಗಾರಿಯನ್ನು ಯೋಜನೆಯ ನಿಗದಿತ ಮಾರ್ಗಸೂಚಿಗಳನ್ವಯ ಕೈಗೊಳ್ಳಬೇಕು. ಕಾಮಗಾರಿಯಲ್ಲಿ ಗುಣಮಟ್ಟಕ್ಕೆ ಯಾವುದೇ ರೀತಿಯ ರಾಜಿ ಮಾಡಿಕೊಳ್ಳದೆ, ತಾಂತ್ರಿಕ ಮಾನದಂಡಗಳನ್ನು ಪಾಲಿಸಬೇಕು. ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳ್ಳುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಸಿಇಒ ಅವರು ಸೂಚಿಸಿದರು.



ಸ್ಥಳೀಯವಾಗಿ ಕೈಗೊಳ್ಳಲಾಗುತ್ತಿರುವ ಇಂತಹ ಜಲ ಸಂರಕ್ಷಣಾ ಕಾಮಗಾರಿಗಳು ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಸಂಗ್ರಹ ಸಾಮರ್ಥ್ಯ ಹೆಚ್ಚಿಸುವುದರ ಜೊತೆಗೆ, ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶವನ್ನೂ ಹೊಂದಿವೆ. ಹೀಗಾಗಿ ಕಾಮಗಾರಿಯ ಅನುಷ್ಠಾನದಲ್ಲಿ ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ, ಜಿಲ್ಲಾ ಪಂಚಾಯತ್‌ನ ಸಹಾಯಕ ಯೋಜನಾಧಿಕಾರಿ, ದಾವಣಗೆರೆ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಕಆಔ) ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ಸೇರಿದಂತೆ ಸಂಬಂಧಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಮದ್ಯ ಮಾರಾಟ ಮತ್ತು ಸರಬರಾಜು ನಿಷೇಧ

**"ಮುಂಜಾನೆಯ ಮೆರಗು"**

**ದಾವಣಗೆರೆ ಸೆ, 16–** ಗಣೇಶ ಚತುರ್ಥಿ ಅಂಗವಾಗಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪನೆ ಮಾಡಲಾಗಿದೆ. ಗಣೇಶ ಮೂರ್ತಿಗಳ ವಿಸರ್ಜನೆಯ ವೇಳೆ ಕಾನೂನು ಸುವ್ಯವಸ್ಥೆ ಮತ್ತು ಸಾರ್ವಜನಿಕ ಶಾಂತಿ ಕಾಪಾಡಲು ಆಯ್ದ ದಿನಗಳಂದು ಜಿಲ್ಲೆಯಾದ್ಯಂತ ಮದ್ಯ ಮಾರಾಟ ಮತ್ತು ಸರಬರಾಜನ್ನು ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಆದೇಶಿಸಿದ್ದಾರೆ.

ಅಬಕಾರಿ ಇಲಾಖೆ ದಾವಣಗೆರೆ ನಗರ ಉಪವಿಭಾಗದ ಪಾಲಿಕೆ ವ್ಯಾಪ್ತಿಯಲ್ಲಿ: ಸೆ.16, 18 ಮತ್ತು 22, ರಂದು ಬೆಳಿಗ್ಗೆ 6 ರಿಂದ ರಾತ್ರಿ 12 ಗಂಟೆಯವರೆಗೆ ನಿಷೇಧಿಸಲಾಗಿದೆ.

ದಾವಣಗೆರೆ ಗ್ರಾಮಾಂತರ ಉಪ ವಿಭಾಗದ ವ್ಯಾಪ್ತಿಯಲ್ಲಿ ಮಲೇಬೆನ್ನೂರು ಪುರಸಭೆ ವ್ಯಾಪ್ತಿ: ಸೆಪ್ಟೆಂಬರ್ 16, 18, 22, 24, 27 ರಂದು ಬೆಳಿಗ್ಗೆ 6 ರಿಂದ ರಾತ್ರಿ 12 ಗಂಟೆಯವರೆಗೆ ನಿಷೇಧಿಸಲಾಗಿದೆ.

ಹರಿಹರ ನಗರ ವ್ಯಾಪ್ತಿ ಅಕ್ಟೋಬರ್ 4 ರಂದು ಬೆಳಿಗ್ಗೆ 6 ರಿಂದ ರಾತ್ರಿ 12 ಗಂಟೆಯವರೆಗೆ ತನಕ ನಿಷೇಧಿಸಲಾಗಿದೆ. ಚನ್ನಗಿರಿ ತಾಲ್ಲೂಕು, ಸೆ.22ರ ಮಧ್ಯರಾತ್ರಿಯಿಂದ ಸೆ.23 ಮಧ್ಯರಾತ್ರಿಯವರೆಗೆ. ಚನ್ನಗಿರಿ ಪಟ್ಟಣ, ನಲ್ಲೂರು, ನಲ್ಲೂರು ಗ್ರಾಮದ ಸುತ್ತಮುತ್ತ ಹೊನ್ನಾಳಿ ಪಟ್ಟಣ ಹಾಗೂ ಸಾಸ್ವೇಹಳ್ಳಿ, ಸಾಸ್ವೇಹಳ್ಳಿ ಸುತ್ತಮುತ್ತ ಸೆ.25ರ ಮಧ್ಯರಾತ್ರಿಯಿಂದ ಸೆ.26ರ ಮಧ್ಯರಾತ್ರಿಯವರೆಗೆ. ಚನ್ನಗಿರಿ ಪಟ್ಟಣ ನಲ್ಲೂರು, ನಲ್ಲೂರು ಗ್ರಾಮದ ಸುತ್ತಮುತ್ತ ಅಕ್ಟೋಬರ್ 1ರ ಮಧ್ಯರಾತ್ರಿಯಿಂದ ಅ.2 ಮಧ್ಯರಾತ್ರಿಯವರೆಗೆ. ಹೊನ್ನಾಳಿ ತಾಲ್ಲೂಕು ಅ.3ರ ಮಧ್ಯರಾತ್ರಿಯಿಂದ ಅ.4ರ ಮಧ್ಯರಾತ್ರಿಯವರೆಗೆ, ಚನ್ನಗಿರಿ ತಾಲ್ಲೂಕು ಅ.7ರ ಮಧ್ಯರಾತ್ರಿಯಿಂದ ಅ.8ರ ಮಧ್ಯರಾತ್ರಿಯವರೆಗೆ ಮದ್ಯ ಮಾರಾಟ ನಿಷೇಧಿಸಲಾಗಿದೆ.

# ರಾಜ್ಯ ಮಟ್ಟದ ವಿಕಲಚೇತನರ ಸಮಾವೇಶ–ಮನವಿ ಸಲ್ಲಿಕೆ

**"ಮುಂಜಾನೆಯ ಮೆರಗು"**

**ಚಿತ್ರದುರ್ಗ ಸೆ, 16–** ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಸಹಯೋಗದೊಂದಿಗೆ ನಗರದ ತರಾಸು ರಂಗಮಂದಿರದಲ್ಲಿ, ಅಕ್ಟೋಬರ್–15 ಗುರುವಾರದಂದು

ನಡೆಯಲಿರುವ ರಾಜ್ಯ ಮಟ್ಟದ ವಿಕಲಚೇತನರ ಸಮಾವೇಶದ ಕುರಿತು ಚಿತ್ರದುರ್ಗ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳಾದ ವೈಶಾಲಿ. ಜೆ ಇವರಿಗೆ ಮನವಿ ಸಲ್ಲಿಸಿ ಮಾತನಾಡಿದ



ವಿಕಲಚೇತನರ ಅಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷರಾದ ಮಹಾಂತೇಶ್ ಬ್ರಹ್ಮ ನಾವು ಸಮಾನತೆ ಮತ್ತು ಸಾಮಾಜಿಕ ಪ್ರಗತಿಯತ್ತ ಸಾಗಬೇಕಾದರೆ ವಿಶೇಷಚೇತನರ ಬದುಕನ್ನು ಬಲಿಷ್ಠಗೊಳಿಸಬೇಕಿದೆ ಹಾಗಾಗಿ ವಿಕಲಚೇತನರ ಹಕ್ಕುಗಳಿಗಾಗಿ ನಮ್ಮ ಹೋರಾಟವೇ ಹೊರೆತು ಸರ್ಕಾರದ ವಿರುದ್ಧವಲ್ಲ ಎಂದು ಮಾತನಾಡಿದ ಅವರು ಜಿಲ್ಲೆಯ ವಿ ಆರ್ ಡಬ್ಲ್ಯೂ,ಯು ಆರ್ ಡಬ್ಲ್ಯೂ,ಎಂ ಆರ್ ಡಬ್ಲ್ಯೂ, ಹಾಗೂ ಜಿಲ್ಲಾ ಸಂಯೋಜಕರ ಉಪಸ್ಥಿತಿಯಲ್ಲಿ ರಾಜ್ಯ ಮಟ್ಟದ ಸಮಾವೇಶದ ಯಶಸ್ಸಿಗೆ ವಿಕಲಚೇತನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಜಾಗೃತಿ ಮೂಡಿಸುವ ಸಲುವಾಗಿ ಪೂರ್ವಭಾವಿ ಸಭೆ ಕರೆಯಬೇಕೆಂದು ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಯವರಾದ ವೈಶಾಲಿಯವರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ವೀಣಾ ಬ್ರಹ್ಮ ಇದ್ದರು.

# ತುಮಕೂರು ದಸರಾ–2026ರ ಲಾಂಛನ ಬಿಡುಗಡೆ

**"ಮುಂಜಾನೆಯ ಮೆರಗು"**

**ತುಮಕೂರು, ಸೆ.16–** ಉಪ ಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅವರು ನಗರದ ಜಿಲ್ಲಾ ಕೇಂದ್ರ ಗ್ರಂಥಾಲಯಸಭಾಂಗಣದಲ್ಲಿ ತುಮಕೂರು ದಸರಾ–2026ರ ಲಾಂಛನ ಬಿಡುಗಡೆ ಮಾಡಿದರು.

ಈ ಬಾರಿ ತುಮಕೂರು ದಸರಾವನ್ನು ಅದ್ದೂರಿಯಾಗಿ ಆಚರಿಸಲಾಗುವುದು. ಅಕ್ಟೋಬರ್ 11ರಿಂದ 21ರವರೆಗೆ ನಡೆಯಲಿರುವ ಉತ್ಸವದ ವಸ್ತುಪ್ರದರ್ಶನದಲ್ಲಿ ಎಐ ಹಾಗೂ ಆಧುನಿಕ ತಂತ್ರಜ್ಞಾನಗಳ ಕುರಿತು ಪ್ರದರ್ಶನಕ್ಕೆ ಅವಕಾಶ ಕಲ್ಪಿಸಲಾಗುವುದು. 2 ಸಾವಿರಕ್ಕೂ ಹೆಚ್ಚು ಮಕ್ಕಳಿಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದು ಎಂದು ತಿಳಿಸಿದರು.

ದಸರಾ ಉತ್ಸವವು ಜಿಲ್ಲೆಯ ಸಂಸ್ಕೃತಿ, ಪರಂಪರೆ, ಇತಿಹಾಸ ಹಾಗೂ ಕಲೆಯನ್ನು ಪರಿಚಯಿಸುವ ಊರ ಹಬ್ಬವಾಗಬೇಕು.




ಮಕ್ಕಳು, ಯುವಕರು ಹಾಗೂ ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಅವಕಾಶ ಕಲ್ಪಿಸುವುದರೊಂದಿಗೆ ಜಾತಿ–ಧರ್ಮದ ಭೇದವಿಲ್ಲದೆ ಎಲ್ಲರೂ ಒಗ್ಗೂಡಿ ಉತ್ಸವ ಆಚರಿಸಬೇಕು ಎಂದು ಕರೆ ನೀಡಿದರು.

ಅಮಾನಿಕೆರೆಯನ್ನು ಅಭಿವೃದ್ಧಿಪಡಿಸಿ ಪ್ರಮುಖ ಆಕರ್ಷಣೆಯನ್ನಾಗಿ ರೂಪಿಸಲಾಗುತ್ತಿದ್ದು, ಸುಮಾರು 100 ಅಡಿ ಎತ್ತರಕ್ಕೆ ಚಿಮುವ ಕಾರಂಜಿ ನಿರ್ಮಿಸಲಾಗುತ್ತಿದೆ. ನಗರದ ಶ್ರೀ ಡಾ. ಶಿವಕುಮಾರ ಸ್ವಾಮೀಜಿ ವೃತ್ತವನ್ನು ಸಹ ಆಕರ್ಷಣೆಯ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸುವ ಉದ್ದೇಶವಿದೆ. ಮಕ್ಕಳನ್ನು ಹಾಗೂ ವಾಹನ ಪ್ರಿಯರನ್ನು ಆಕರ್ಷಿಸಲು ಆಧುನಿಕ ಕಾರುಗಳ ಪ್ರದರ್ಶನವನ್ನೂ ಆಯೋಜಿಸಲಾಗುವುದು ಎಂದರು.

ಕಳೆದ ಎರಡು ವರ್ಷಗಳಲ್ಲಿ ತುಮಕೂರು ದಸರಾ ಯಶಸ್ವಿಯಾಗಿದ್ದು, ವೈಜ್ಞಾನಿಕ ವಸ್ತುಪ್ರದರ್ಶನ, ಯುವ ದಸರಾ, ಮಹಿಳಾ ದಸರಾ, ಕವಿಗೋಷ್ಠಿ, ನವದುರ್ಗೆಯರ ಪೂಜೆ, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಹೆಲಿಕಾಪ್ಟರ್ ಪ್ರದರ್ಶನ ಜನರ ಗಮನ ಸೆಳೆದಿದ್ದವು ಎಂದು ಅವರು ವಿವರಿಸಿದರು.

ಕಾರ್ಯಕ್ರಮದಲ್ಲಿ ಶಾಸಕ ಜಿ.ಬಿ. ಜ್ಯೋತಿಗಣೇಶ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಜಿ. ಚಂದ್ರಶೇಖರ್ ಗೌಡ, ಬಿಎಂಟಿಸಿ ಉಪಾಧ್ಯಕ್ಷ ನಿಕೇತ್ ರಾಜ್ ಎಂ., ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಪಂ ಸಿಇಒ ಜಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಪಾಲಿಕೆ ಆಯುಕ್ತೆ ಶುಭಾ, ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ಸೇರಿದಂತೆ ಹಲವು ಗಣ್ಯರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

# ಹೊರ ಜಿಲ್ಲೆಯ ಡಿಜೆಗೆ ಪ್ರವೇಶವಿಲ್ಲ, 4 ಬಾಕ್ಸ್ ಸಾಮಾನ್ಯ ಧ್ವನಿ ವರ್ಧಕಗಳ ಬಳಕೆಗೆ ಅವಕಾಶ

**"ಮುಂಜಾನೆಯ ಮೆರಗು"**

**ದಾವಣಗೆರೆ ಸೆ, 16–** ಜಿಲ್ಲೆಯಾದ್ಯಂತ ಸಾರ್ವಜನಿಕ ಶಾಂತಿ ಹಾಗೂ ಕಾನೂನು ಸುವ್ಯವಸ್ಥೆಗೆ ಕಾಪಾಡುವ ಹಿತದೃಷ್ಟಿಯಿಂದ ಗಣೇಶ ಮೂರ್ತಿಗಳು ವಿಸರ್ಜನೆಯಾಗುವವರೆಗೆ ಸೌಂಡ್ ಸಿಸ್ಟಂ ಬಳಕೆಗೆ ಸಂಬಂಧಿಸಿದಂತೆ ಕೆಳಕಂಡ ಷರತ್ತುಗಳಿಗೆಗೊಳಪಟ್ಟು ನಿಯಮಾನುಸಾರ ಎಲ್ಲಾ ಅಗತ್ಯ ಮುನ್ನೆಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಆದೇಶಿಸಿದ್ದಾರೆ.

**Noise Pollution (Regulation & Control) Rule-2000** ಶಬ್ದ ಮಾಲಿನ್ಯ ತಡೆ ನಿಯಮಾನುಸಾರ ಧ್ವನಿವರ್ಧಕಗಳ ಶಬ್ದದ ಬಳಕೆಯನ್ನು ಪೊಲೀಸ್ ಇಲಾಖೆಯವರು ಪರಿಶೀಲಿಸಿ ಅನುಮತಿಯನ್ನು ನೀಡಬಹುದು.

ಇತರೆ ಜಿಲ್ಲೆಗಳಿಂದ ಗಣೇಶ ಹಬ್ಬದ ಸಂದರ್ಭದಲ್ಲಿ ಡಿ.ಜೆ ಸಿಸ್ಟಂ ತಂದು ಜಿಲ್ಲೆಯಲ್ಲಿ ಬಳಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಡಿಜೆ ಸೌಂಡ್ ಸಿಸ್ಟಂ ಮತ್ತು ಹೆಚ್ಚಿನ ಶಬ್ದ ಹೊರಸೂಸುವ ಉಪಕರಣಗಳನ್ನು ಹೊರತು ಪಡಿಸಿ 4 ಬಾಕ್ಸ್ ಸಾಮಾನ್ಯ ಧ್ವನಿ ವರ್ದಕಗಳನ್ನು ಬಳಸಲು ಅನುಮತಿ ನೀಡಲಾಗಿದೆ.

ಡಿ.ಜೆ ಗಳಲ್ಲಿ ಬಳಸಲಾಗುವ ಹೆಚ್ಚಿನ ಶಬ್ದ ಹೊರಸೂಸುವ ಪ್ರೆಸರ್ ಮೈಡ್ಸ್ (Pressure Mids) ಹಾಗೂ ಇತರೆ ಹೆಚ್ಚಿನ ಶಬ್ದಗಳನ್ನು ವಿಶೇಷವಾಗಿ ಹೊರಸೂಸುವ ಉಪಕರಣಗಳ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಮಾನದಂಡಗಳನ್ನು ಡಿ.ಜೆ ಬಳಕೆದಾರರು ಮತ್ತು ಆಯೋಜಕರು ಪಾಲಿಸದೇ ಇದ್ದಲ್ಲಿ ಅಂತಹವರ ವಿರುದ್ಧ ಪೊಲೀಸ್ ಇಲಾಖೆಯವರು ನಿಯಮಾನುಸಾರ ಸೂಕ್ತ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಆದೇಶದಲ್ಲಿ ತಿಳಿಸಿದ್ದಾರೆ.

# ಸರ್ಕಾರಕ್ಕೆ ಕಾಯಕಲ್ಪ ನೀಡಲು ಎಐಸಿಸಿ ಪ್ರಧಾನ ಕಾರ್ಯದರ್ಶಿಗಳ ಸರಣಿ ಸಭೆ

**"ಮುಂಜಾನೆಯ ಮೆರಗು"**

**ಬೆಂಗಳೂರು, ಸೆ.16–** ರಾಜ್ಯ ಸರ್ಕಾರ ಮತ್ತು ಪಕ್ಷಕ್ಕೆ ಕಾಯಕಲ್ಪ ನೀಡುವ ನಿಟ್ಟಿನಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳು ಇಂದು ಬೆಂಗಳೂರಿನಲ್ಲಿ ಸರಣಿ ಸಭೆಗಳನ್ನು ನಡೆಸಿದ್ದಾರೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೇವಾಲ ಅವರು ಬೆಂಗಳೂರಿಗೆ ಆಗಮಿಸಿದ್ದು, ಬೆಳಗ್ಗೆ ಕಾಂಗ್ರೆಸ್ನ ಜಿಲ್ಲಾಧ್ಯಕ್ಷರುಗಳ ಜೊತೆ ಚರ್ಚೆ ನಡೆಸಿದ್ದಾರೆ. ಮಧ್ಯಾಹ್ನ ಎಸ್‌ಐಆರ್ ಬಗ್ಗೆ ಪ್ರಮುಖ ನಾಯಕರ ಜೊತೆ ಸಮಾಲೋಚನೆ ನಡೆದಿದೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್, ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಮತ್ತಿತರರು ಸಭೆಯಲ್ಲಿ ಭಾಗವಹಿಸಿದ್ದರು. ಇತ್ತೀಚೆಗೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೆಹಲಿಗೆ ಭೇಟಿ ನೀಡಿ, ವರಿಷ್ಠ ನಾಯಕರನ್ನು ಭೇಟಿ ಮಾಡಿ ಕೆಲ ಮಾಹಿತಿ ವಿನಿಮಯ ಮಾಡಿಕೊಂಡಿದ್ದರು. ಅದರ ಬೆನ್ನಲ್ಲೇ ಪ್ರಧಾನ ಕಾರ್ಯದರ್ಶಿಗಳು ರಾಜ್ಯಕ್ಕಾಗಮಿಸಿರುವುದು ಗಮನ ಸೆಳೆದಿದೆ.

ಖಾಲಿಯಿರುವ ಎರಡು ಸಚಿವ ಸ್ಥಾನಗಳಿಗೆ ನೇಮಕಾತಿ, ವಿಧಾನ ಪರಿಷತ್‌ನಲ್ಲಿ ತೆರವಾಗಿರುವ 5 ಸದಸ್ಯ ಸ್ಥಾನಗಳು ಹಾಗೂ ನಿಗಮ–ಮಂಡಳಿಗಳ ಅಧ್ಯಕ್ಷರ ಆಯ್ಕೆಗೆ ಈ ಸಂದರ್ಭದಲ್ಲಿ ಚರ್ಚೆ ನಡೆಸಲಾಗಿದೆ. ನಿಗಮ–ಮಂಡಳಿಗಳಲ್ಲಿ ಎರಡೂವರೆ ವರ್ಷ ಪೂರ್ಣಗೊಂಡಿರುವವರು ರಾಜೀನಾಮೆ ನೀಡಬೇಕು ಎಂದು ಈಗಾಗಲೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಚ್ಚರಿಕೆ ನೀಡಿದ್ದರು. ಆದರೂ ಬಹುತೇಕರು ರಾಜೀನಾಮೆ ನೀಡಿಲ್ಲ. ಹೀಗಾಗಿ ಅವರಿಂದ ರಾಜೀನಾಮೆ ಪಡೆದು ಬೇರೆಯವರನ್ನು ನೇಮಿಸಲು ಕಾಂಗ್ರೆಸ್ ತಯಾರಿ ನಡೆಸಿದೆ. ಇಂದಿನ ಸಭೆಯಲ್ಲಿ ಈ ಕುರಿತು ಮಹತ್ವದ ಚರ್ಚೆಗಳಾಗಿವೆ.

ನೂತನ ಜಿಲ್ಲಾಧ್ಯಕ್ಷರಿಗೆ ಮುಂದಿನ ದಿನಗಳಲ್ಲಿ ನಡೆಯುವ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಜ್ಜುಗೊಳ್ಳುವಂತೆ ಪಕ್ಷದ ವರಿಷ್ಠರು ಸೂಚನೆ ನೀಡಿದ್ದಾರೆ. ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ, ಜಿಲ್ಲಾ ಪಂಚಾಯತಿ ಸೇರಿದಂತೆ ನಗರಸಭೆ, ಪುರಸಭೆ, ಪಾಲಿಕೆಗಳು, ಗ್ರೇಟರ್ ಬೆಂಗಳೂರು ಒಳಗೊಂಡಂತೆ ಹಲವು



ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಕಾಂಗ್ರೆಸ್‌ಗೆ ಪ್ರತಿಷ್ಠೆಯ ಕಣಗಳಾಗಿವೆ.

ಅದೇ ರೀತಿ ಕಾಂಗ್ರೆಸ್ ಹಿರಿಯೂರು ವಿಧಾನಸಭೆಗೆ ನಡೆಯುವ ಉಪ ಚುನಾವಣೆ ಕೂಡ ಗೆಲ್ಲುವ ಪಣತೊಟ್ಟಿದೆ. ಈ ಕುರಿತು ಇಂದಿನ ಸಭೆಯಲ್ಲಿ ಜಿಲ್ಲಾಧ್ಯಕ್ಷರಿಗೆ ಮಾಹಿತಿ ನೀಡಲಾಗಿದೆ.

ಈಗಾಗಲೇ ಗ್ಯಾರಂಟಿ ಸಮಿತಿಗಳಿಗೂ ಅಧ್ಯಕ್ಷರು ಮತ್ತು ಸದಸ್ಯರನ್ನು ನೇಮಿಸಲಾಗಿದೆ. ಭಾರತ್ ಜೋಡೋ ಯುವ ಸಂಘಗಳು ಕಾಂಗ್ರೆಸ್ನ ಸಂಘಟನಾ ಚಟುವಟಿಕೆಗಳಿಗೆ ಭದ್ರ ಬುನಾದಿ ಹಾಕುವ ವೇದಿಕೆಗಳಾಗಿವೆ.

ಅವುಗಳಿಗೆ ಸದಸ್ಯರನ್ನು ನೇಮಿಸುವಾಗ ಎಚ್ಚರಿಕೆ ವಹಿಸುವಂತೆ ಪಕ್ಷದ ಪ್ರಮುಖರು ಜಿಲ್ಲಾಧ್ಯಕ್ಷರಿಗೆ ಮಾಹಿತಿ ನೀಡಿದ್ದಾರೆ. ಚುನಾವಣಾ ಆಯೋಗದಿಂದ ನಡೆದಿರುವ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ ಕುರಿತಂತೆ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆಯೂ ಸಭೆಯಲ್ಲಿ ಸ್ಪಷ್ಟ ನಿರ್ದೇಶನಗಳನ್ನು ನೀಡಲಾಗಿದೆ.

# ಇಂಡಿಯಾ ಸ್ಕಿಲ್ ಸ್ಪರ್ಧೆ ನೋಂದಾಣ ಅವಧಿ ವಿಸ್ತರಣೆ

**"ಮುಂಜಾನೆಯ ಮೆರಗು"**

**ದಾವಣಗೆರೆ ಸೆ, 16–** ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ವತಿಯಿಂದ ಇಂಡಿಯಾ ಸ್ಕಿಲ್–2026 ರಲ್ಲಿ 63 ಕೌಶಲ್ಯಗಳ ಸ್ಪರ್ಧೆಗೆ ನೊಂದಣಿ ಪ್ರಕ್ರಿಯೆ ಆರಂಭವಾಗಿದ್ದು ಸೆಪ್ಟೆಂಬರ್ 22 ರವರೆಗೆ ವಿಸ್ತರಿಸಲಾಗಿದೆ.

2028 ರಲ್ಲಿ ಜಪಾನ್ ದೇಶದ ಐಚಿ ನಗರದಲ್ಲಿ ನಡೆಯಲಿರುವ "ವಿಶ್ವ ಕೌಶಲ್ಯ ಸ್ಪರ್ಧೆಯಲ್ಲಿ ಭಾರತವನ್ನು ಪ್ರತಿನಿಧಿಸಲು ಬಯಸುವ ಯುವಕ–ಯುವತಿಯರಿಗೆ ಸುವರ್ಣ ಅವಕಾಶವಾಗಿದ್ದು ಸದುಪಯೋಗ ಪಡೆಯಲು ಜಿಲ್ಲಾ ಕೌಶಲ್ಯಿಭಿವೃದ್ಧಿ ಅಧಿಕಾರಿ ಬಸವರಾಜ. ಐ ತಿಳಿಸಿದ್ದಾರೆ.


# ಲಾಡ್ಜ್‌ನಲ್ಲಿ ಬೆಂಗಳೂರಿನ ಯುವತಿ ಅನುಮಾನಾಸ್ಪದ ಸಾವು

**"ಮುಂಜಾನೆಯ ಮೆರಗು"**

**ಸಕಲೇಶಪುರ, ಸೆ.16–** ಲಾಡ್ಜ್‌ವೊಂದರಲ್ಲಿ ಬೆಂಗಳೂರಿನ ಯುವತಿಯೊಬ್ಬರು ಅನುಮಾನಾಸ್ಪದವಾಗಿ ಮೃತಪಟ್ಟಿರುವ ಘಟನೆ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಮೃತ ಯುವತಿಯನ್ನು ಬೆಂಗಳೂರಿನ ನಾಗಸಂದ್ರ ನಿವಾಸಿ ವರ್ಷಾ (23) ಎಂದು ಗುರುತಿಸಲಾಗಿದೆ.

ಕಳೆದ ಶುಕ್ರವಾರ ವರ್ಷಾ ತನ್ನ ಬಾಯ್‌ಫ್ರೆಂಡ್ ರಘು ಹಾಗೂ ಸ್ನೇಹಿತ ದರ್ಶನ್ ಜೊತೆ ಸಕಲೇಶಪುರಕ್ಕೆ ಟ್ರಿಪ್ ಬಂದಿದ್ದರು. ಶನಿವಾರ, ಭಾನುವಾರ ಹಾಗೂ ಸೋಮವಾರ ಬೆಟ್ಟದ ಭೈರವೇಶ್ವರ, ಮಜಗಹಳ್ಳಿ ಫಾಲ್ಸ್ ಸೇರಿದಂತೆ ಹಲವು ಪ್ರವಾಸಿ ತಾಣಗಳಿಗೆ ಮೂವರು ಭೇಟಿ ನೀಡಿದ್ದರು. ನಂತರ ವಳಲಹಳ್ಳಿ ಕೂಡಿಗೆಯಲ್ಲಿರುವ ಲಾಡ್ಜ್‌ನಲ್ಲಿ ಒಂದೇ ಕೊಠಡಿಯಲ್ಲಿ ಮೂವರು ತಂಗಿದ್ದರು. ನಿನ್ನೆ ಸ್ನಾನಕ್ಕೆ ತೆರಳಿದ್ದ ವೇಳೆ ವರ್ಷಾ ಕುಸಿದು ಬಿದ್ದಿದ್ದಾಳೆ ಎನ್ನಲಾಗಿದೆ.

ತಕ್ಷಣ ರಘು ಹಾಗೂ ದರ್ಶನ್ ಅವರು ವರ್ಷಾಳನ್ನು ಸಕಲೇಶಪುರ ತಾಲೂಕು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲು ಮುಂದಾಗಿದ್ದಾರೆ. ಆದರೆ, ವೈದ್ಯರು ಪರೀಕ್ಷಿಸಿದಾಗ ಯುವತಿ ಮಾರ್ಗಮಧ್ಯೆಯೇ ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ. ವರ್ಷಾ ಸಾವಿಗೆ ನಿಖರ ಕಾರಣ ಸದ್ಯಕ್ಕೆ ತಿಳಿದುಬಂದಿಲ್ಲ.



# ಯುವ ಸಂಸತ್ತು ಜಿಲ್ಲಾ ಮಟ್ಟದ ಸಮಿತಿ ಸಭೆ

**"ಮುಂಜಾನೆಯ ಮೆರಗು"**

**ದಾವಣಗೆರೆ ಸೆ, 16–** ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಯುವ ಸಂಸತ್ತು ಜಿಲ್ಲಾ ಮಟ್ಟದ ಸಮಿತಿ ಸಭೆಯನ್ನು ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 17 ರಂದು ಮಧ್ಯಾಹ್ನ 3.30ಕ್ಕೆ ಅಪರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣಲ್ಲಿ ಆಯೋಜಿಸಲಾಗಿದೆ.


**ಮುಂಜಾನೆಯ ಮೆರಗು**

ಮುಂಜಾನೆಯ ಮೆರಗು ಕನ್ನಡ ದಿನ ಪತ್ರಿಕೆಯನ್ನು ದಿನನಿತ್ಯ ತಪ್ಪದೇ ಓದಿರಿ

# ಸತೀಶ್ ಜಾರಕಿಹೊಳಿಗೆ ವಿರುದ್ಧ ಪಿಎಂಎಲ್ಎ ಅಡಿಯಲ್ಲಿ ತನಿಖೆ

"ಮುಂಜಾನೆಯ ಮೆರಗು"

**ಬೆಂಗಳೂರು,ಸೆ.16–** ರಾಜ್ಯ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ವಿರುದ್ಧ ಜಾರಿ ನಿರ್ದೇಶನಾಲಯ (ಇಡಿ) ತನ್ನ ತನಿಖಾ ಜಾಲವನ್ನು ಮತ್ತಷ್ಟು ಬಿಗಿಗೊಳಿಸುತ್ತಿದ್ದು, ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯಡಿ ಹೊಸ ಪ್ರಕರಣ ದಾಖಲಿಸಲು ಸಿದ್ಧತೆ ನಡೆಸಿದೆ.

ಮೂಲಗಳ ಪ್ರಕಾರ, ಇತ್ತೀಚೆಗೆ ಬೆಂಗಳೂರು, ಬೆಳಗಾವಿ, ಗೋಕಾಕ್ ಹಾಗೂ ಕೋಲ್ಕತ್ತಾಗಳಲ್ಲಿ ಸಚಿವರ ಆಪ್ತರು ಮತ್ತು ಕುಟುಂಬಸ್ಥರ ನಿವಾಸಗಳ ಮೇಲೆ ನಡೆದ ಇಡಿ ದಾಳಿ ವೇಳೆ 3.3 ಕೋಟಿ ನಗದು, 15 ಲಕ್ಷ ಮೌಲ್ಯದ ವಿದೇಶಿ ಕರೆನ್ಸಿ ಹಾಗೂ ಹಲವಾರು ಮಹತ್ವದ ದಾಖಲೆಗಳನ್ನು ಜಪ್ತಿ ಮಾಡಲಾಗಿತ್ತು.

ಹವಾಲಾ ದಂಧೆ ಹಾಗೂ ಗಡಿಯಾಚೆಗಿನ ವಿದೇಶಿ ವಹಿವಾಟು ನಡೆಸಿರುವ ಶಂಕೆ ವ್ಯಕ್ತವಾಗಿದ್ದು, ತನಿಖೆಯನ್ನು ತೀವ್ರಗೊಳಿಸಲು ಇ.ಡಿ ನಿರ್ದೇಶಕ ರಾಹುಲ್ ನವೀನ್ ಅವರು ಕರ್ನಾಟಕ ಮತ್ತು ಗೋವಾ ವಲಯದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.ವಿದೇಶಿ ಹೂಡಿಕೆ, ಗಡಿಯಾಚೆಗಿನ ವ್ಯವಹಾರಗಳು ಹಾಗೂ ಹಣಕಾಸು ಅಕ್ರಮಗಳ ಆರೋಪಗಳ ಹಿನ್ನೆಲೆಯಲ್ಲಿ ನಡೆದಿರುವ ತನಿಖೆ ಇದೀಗ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ಮುಂದಿನ ಹಂತಕ್ಕೆ ಸಾಗುವ ಸಾಧ್ಯತೆ ಕುರಿತು ವರದಿಗಳು ಹೊರಬಿದ್ದಿವೆ.

ಸೆ.9–10ರಂದು ಬೆಂಗಳೂರು, ಬೆಳಗಾವಿ, ಗೋಕಾಕ್ ಹಾಗೂ ಕೋಲ್ಕತ್ತಾದಲ್ಲಿ ಸತೀಶ್ ಜಾರಕಿಹೊಳಿ ಮತ್ತು ಅವರ ಆಪ್ತರಿಗೆ ಸಂಬಂಧಿಸಿದ 21 ಸ್ಥಳಗಳಲ್ಲಿ ಇಡಿ ಶೋಧ ನಡೆಸಿತ್ತು. ಈ ಕಾರ್ಯಾಚರಣೆಯಲ್ಲಿ 3.3 ಕೋಟಿ ನಗದು, ಸುಮಾರು 15 ಲಕ್ಷ ಮೌಲ್ಯದ ವಿದೇಶಿ ಕರೆನ್ಸಿ ಹಾಗೂ ವಿದೇಶಿ ಹೂಡಿಕೆಗಳಿಗೆ ಸಂಬಂಧಿಸಿದ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಇಡಿ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.

ಇದುವರೆಗೆ ಈ ಕಾರ್ಯಾಚರಣೆ ಮುಖ್ಯವಾಗಿ ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ(ಫೆಇಎಂಎ) ವ್ಯಾಪ್ತಿಯಲ್ಲಿನ ಅಘೋಷಿತ ವಿದೇಶಿ ಹೂಡಿಕೆಗಳು, ಗಡಿಯಾಚೆಗಿನ ವ್ಯವಹಾರಗಳು ಮತ್ತು ಹಣಕಾಸು ಅಕ್ರಮಗಳ ಪರಿಶೀಲನೆಗೆ ಸಂಬಂಧಿಸಿದೆ ಎಂದು ಇಡಿ ಹೇಳಿದೆ. ಆದರೆ ಶೋಧ ಕಾರ್ಯದಲ್ಲಿ ದೊರೆತ ದಾಖಲೆಗಳು ಮತ್ತು ಹಣದ ವಹಿವಾಟಿನ ವಿವರಗಳ ಆಧಾರದ ಮೇಲೆ ಹಣದ ಮೂಲ, ಅದರ ವರ್ಗಾವಣೆ ಹಾಗೂ ಅಂತಿಮ ಬಳಕೆ–ಯ ಬಗ್ಗೆ ತನಿಖೆ ವಿಸ್ತರಿಸುವ ಸಾಧ್ಯತೆ ಇದೆ ಎಂಬುದು ಈಗಿನ ಚರ್ಚೆಯ ಕೇಂದ್ರವಾಗಿದೆ. ಗುತ್ತಿಗೆದಾರರಿಂದ



ಸಂಗ್ರಹಿಸಲಾಗಿದೆ ಎನ್ನಲಾದ ಹಣವನ್ನು ವಿದೇಶಿ ಆಸ್ತಿಗಳು ಹಾಗೂ ಆಫ್ರಿಕಾದ ಗಣಿಗಾರಿಕೆ ಉದ್ಯಮಗಳಲ್ಲಿ ಹೂಡಿಕೆ ಮಾಡಿರುವ ಆರೋಪಗಳನ್ನೂ ಇಡಿ ಪರಿಶೀಲಿಸುತ್ತಿದೆ.

ಕಾಂಗೋದ Magnitude Star SARL, Eldorado Mining Re-source ಹಾಗೂ ಜಾಂಬಿಯಾದ Nava Aurum Mining ಸೇರಿದಂತೆ ಕೆಲವು ವಿದೇಶಿ ಸಂಸ್ಥೆಗಳಿಗೆ ಸಂಬಂಧಿಸಿದ ದಾಖಲೆಗಳು ತನಿಖಾಧಿಕಾರಿಗಳ ಗಮನಕ್ಕೆ ಬಂದಿವೆ ಎಂದು ವರದಿಯಾಗಿದೆ. ಇವುಗಳ ಕುರಿತು ಅಂತಿಮ ನಿರ್ಣಯ ತನಿಖೆ ಮತ್ತು ಕಾನೂನು ಪ್ರಕ್ರಿಯೆಯ ನಂತರವೇ ಸಾಧ್ಯ.

ಇಡಿ ಕಾರ್ಯಾಚರಣೆಯಲ್ಲಿ ಪತ್ತೆಯಾದ 3.3 ಕೋಟಿ ಭಾರತೀಯ ಕರೆನ್ಸಿ ಮತ್ತು 15 ಲಕ್ಷದಷ್ಟು ವಿದೇಶಿ ಕರೆನ್ಸಿ ತನಿಖೆಯ ಪ್ರಮುಖ ಅಂಶವಾಗಿದೆ. ಹಣದ ಮೂಲ, ಅದರ ಮಾಲೀಕತ್ವ ಹಾಗೂ ವ್ಯವಹಾರಗಳಿಗೆ ಸಂಬಂಧಿಸಿದ ದಾಖಲೆಗಳೊಂದಿಗೆ ಅದರ ಹೊಂದಾಣಿಕೆ ಕುರಿತು ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

ಸತೀಶ್ ಜಾರಕಿಹೊಳಿ ಅವರು ವಶಪಡಿಸಿಕೊಂಡಿರುವ ಹಣ ತಮ ಕುಟುಂಬಕ್ಕೆ ಸೇರಿದ್ದಾಗಿದ್ದು, ಅದರ ಮೂಲವನ್ನು ದಾಖಲೆಗಳ ಮೂಲಕ ವಿವರಿಸುವುದಾಗಿ ಹೇಳಿರುವುದಾಗಿ ವರದಿಯಾಗಿದೆ.

ಇಡಿ ನಿರ್ದೇಶಕರಿಂದ ತನಿಖೆಗೆ ವೇಗ ಇದೇ ಸಂದರ್ಭದಲ್ಲಿ ಇಡಿ ನಿರ್ದೇಶಕ ರಾಹುಲ್ ನವೀನ್ ಅವರು ಸೆಪ್ಟೆಂಬರ್ 14–15ರಂದು ಬೆಂಗಳೂರಿನ ಐಐಎಂನಲ್ಲಿ ನಡೆದ ಹಿರಿಯ ಅಧಿಕಾರಿಗಳ ಸಮೇಳನದಲ್ಲಿ ತನಿಖೆಗಳನ್ನು ವೇಗಗೊಳಿಸುವುದು, ವಿವಿಧ ತನಿಖಾ ಸಂಸ್ಥೆಗಳ ನಡುವೆ ಮಾಹಿತಿ ಹಂಚಿಕೆ ಹೆಚ್ಚಿಸುವುದು ಹಾಗೂ ಪ್ರಮುಖ ಪಿಎಂಎಲ್ಎ ಪ್ರಕರಣಗಳ ವಿಚಾರಣೆಯನ್ನು ತ್ವರಿತಗೊಳಿಸುವ ಕುರಿತು ಸೂಚನೆ ನೀಡಿದ್ದಾರೆ. ಪ್ರತಿ ವಲಯದಲ್ಲಿ ಕನಿಷ್ಠ 10 ಪ್ರಮುಖ ಪ್ರಕರಣಗಳನ್ನು ವೇಗವಾಗಿ ವಿಚಾರಣೆಗೆ ತರುವ ಗುರಿಯನ್ನೂ ಅವರು ಪ್ರಸ್ತಾಪಿಸಿದ್ದಾರೆ ಎಂದು ವರದಿಯಾಗಿದೆ.

ಇದರ ಬೆನ್ನಲ್ಲೇ ಕರ್ನಾಟಕಕ್ಕೆ ಸಂಬಂಧಿಸಿದ ಹಲವು ಪ್ರಮುಖ ಪ್ರಕರಣಗಳ ತನಿಖೆಗೆ ವೇಗ ನೀಡಲಾಗುತ್ತಿದೆ ಎಂಬ ವರದಿಗಳು ಮಹತ್ವ ಪಡೆದಿವೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣಕಾಸು ಅಕ್ರಮ, ಮುಡಾ, ಕೆಪಿಎಸ್‌ಸಿ ಅಕ್ರಮ ಸೇರಿದಂತೆ ವಿವಿಧ ಪ್ರಕರಣಗಳು ಈಗಾಗಲೇ ಇಡಿ ತನಿಖೆಯ ವ್ಯಾಪ್ತಿಗೆ ಬಂದಿವೆ. ಕೆಪಿಎಸ್‌ಸಿ ನೇಮಕಾತಿ ಅಕ್ರಮಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ತನಿಖೆಗಳು ಮುಂದುವರಿದಿದ್ದು, ಇತ್ತೀಚಿನ ನ್ಯಾಯಾಲಯದ ಬೆಳವಣಿಗೆಗಳೂ ಪ್ರಕರಣದ ವ್ಯಾಪ್ತಿಯನ್ನು ತೋರಿಸುತ್ತವೆ.

ಸತೀಶ್ ಜಾರಕಿಹೊಳಿ ವಿರುದ್ಧದ ಇಡಿ ಕ್ರಮ ರಾಜಕೀಯವಾಗಿಯೂ ಚರ್ಚೆಗೆ ಕಾರಣವಾಗಿದೆ. ಕಾಂಗ್ರೆಸ್ ನಾಯಕರು ಕೇಂದ್ರ ತನಿಖಾ ಸಂಸ್ಥೆಗಳ ಕ್ರಮವನ್ನು ರಾಜಕೀಯ ಉದ್ದೇಶಿತ ಎಂದು ಟೀಕಿಸಿರುವುದಾಗಿ ವರದಿಯಾಗಿದೆ. ಮತ್ತೊಂದೆಡೆ, ಇಡಿ ತನ್ನ ಕ್ರಮವನ್ನು ವಿದೇಶಿ ಹೂಡಿಕೆ, ಎಫ್‌ಇಎಂಎ ಉಲ್ಲಂಘನೆ ಮತ್ತು ಹಣಕಾಸು ಅಕ್ರಮಗಳ ತನಿಖೆಯ ಭಾಗವೆಂದು ಮುಂದಿಟ್ಟಿದೆ. ಹೀಗಾಗಿ, ಶೋಧ ಕಾರ್ಯಾಚರಣೆ, ದಾಖಲೆ ಮತ್ತು ಹಣ ವಶ ಹಣದ ಮೂಲ ಹಾಗೂ ವಿದೇಶಿ ವ್ಯವಹಾರಗಳ ಪರಿಶೀಲನೆ, ಅಗತ್ಯವಿದ್ದರೆ ಪಿಎಂಎಲ್ಎ ಅಡಿ ಮುಂದಿನ ಕ್ರಮ ಎಂಬ ಹಂತಗಳಲ್ಲಿ ಪ್ರಕರಣ ಸಾಗುವ ಸಾಧ್ಯತೆ ಈಗ ಗಮನ ಸೆಳೆಯುತ್ತಿದೆ. .

ಸೆಪ್ಟೆಂಬರ್ 9–10ರ ಶೋಧದಿಂದ ಆರಂಭವಾದ ಜಾರಕಿಹೊಳಿ ಪ್ರಕರಣದಲ್ಲಿ ಇಡಿ ಇದೀಗ ಹಣದ ಮೂಲ ಮತ್ತು ಅದರ ಅಂತಿಮ ಗಮ್ಯವನ್ನು ಪತ್ತೆಹಚ್ಚುವತ್ತ ಗಮನ ಹರಿಸಿರುವುದು ಪ್ರಮುಖ ಬೆಳವಣಿಗೆಯಾಗಿದೆ. ಮುಂದಿನ ದಿನಗಳಲ್ಲಿ ವಶಪಡಿಸಿಕೊಂಡ ದಾಖಲೆಗಳ ಪರಿಶೀಲನೆ, ಹಣಕಾಸು ವಹಿವಾಟಿನ ಜಾಡು ಹಾಗೂ ಸಂಬಂಧಪಟ್ಟ ವ್ಯಕ್ತಿಗಳ ಹೇಳಿಕೆಗಳು ಪ್ರಕರಣದ ದಿಕ್ಕನ್ನು ನಿರ್ಧರಿಸುವ ಸಾಧ್ಯತೆಯಿದೆ.

# ಗಣೇಶ ಮೂರ್ತಿ ಮೆರವಣಿಗೆ–ವಿಸರ್ಜನೆ
## ಶಾಂತಿ ಕಾಪಾಡಲು ಪೊಲೀಸ್ ಆಯುಕ್ತರ ಸೂಚನೆ



"ಮುಂಜಾನೆಯ ಮೆರಗು"

**ಬೆಂಗಳೂರು, ಸೆ.16–** ಗಣೇಶ ಮೂರ್ತಿ ಮೆರವಣಿಗೆ, ವಿಸರ್ಜನೆ ಸಂದರ್ಭದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳಿಗೆ ಆಸ್ಪದ ನೀಡದಂತೆ ಶಾಂತಿ ಮತ್ತು ಸೌಹಾರ್ದತೆ ಕಾಪಾಡಬೇಕೆಂದು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಅವರು ನಗರದ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಗೆ ಆದೇಶಿಸಿದ್ದಾರೆ.

ಗಣೇಶ ಮೂರ್ತಿ ವಿಸರ್ಜನಾ ಸ್ಥಳಗಳಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಮೂಲಕ ಅತ್ಯಂತ ಜಾಗರೂಕತೆಯಿಂದ ಕರ್ತವ್ಯ ನಿರ್ವಹಿಸುವಂತೆ ಆಯುಕ್ತರು ಸೂಚಿಸಿದ್ದಾರೆ.ಗಣೇಶ ಮೂರ್ತಿ ಮೆರವಣಿಗೆ ಸಂದರ್ಭದಲ್ಲಿ ಪ್ರತಿಯೊಂದು ವಿಷಯಕ್ಕೂ ಮಹತ್ವ ನೀಡಬೇಕು. ಸೂಕ್ಷ್ಮ ಪ್ರದೇಶಗಳಲ್ಲಿ ಗಸ್ತು ನಡೆಸಿ, ಯಾವುದೇ ಅಹಿತಕರ ಘಟನೆಗಳು ನಡೆ–ಯದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

ಸಾರ್ವಜನಿಕರು ಹಾಗೂ ಗಣೇಶ ಮೂರ್ತಿ ಪ್ರತಿಷ್ಠಾಪನಾ ಆಯೋಜಕರು ಮತ್ತು ಮುಖಂಡರೊಂದಿಗೆ ನಿರಂತರ ಸಮನ್ವಯ ಸಾಧಿಸಬೇಕು. ಯಾವುದೇ ಅಗತ್ಯ ಮಾಹಿತಿ ದೊರೆತಲ್ಲಿ ತಕ್ಷಣ ತಮ್ಮ ಗಮನಕ್ಕೆ ತರುವಂತೆ ಅವರು ಸಲಹೆ ನೀಡಿದ್ದಾರೆ. ಬಂದೋಬಸ್ತ್ ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಅಧಿಕಾರಿ ಮತ್ತು ಸಿಬ್ಬಂದಿ ಕರ್ತವ್ಯದಲ್ಲಿ ಸದಾ ಸಕ್ರಿಯರಾಗಿ ಕಾರ್ಯನಿರ್ವಹಿಸಬೇಕು. ಅವರಿಗೆ ಅಗತ್ಯ ಆಹಾರ ವ್ಯವಸ್ಥೆ ಮಾಡಬೇಕು ಎಂದು ಅವರು ಹೇಳಿದರು.

ಮೆರವಣಿಗೆ ಸೇರಿದಂತೆ ಪ್ರಮುಖ ಸಂದರ್ಭಗಳಲ್ಲಿ ನೇತ್ರ ಕ್ಯಾಮೆರಾ ಹಾಗೂ ಮ್ಯಾಜಿಕ್ ಬಾಕ್ಸ್ ಕ್ಯಾಮೆರಾ ವ್ಯವಸ್ಥೆಯನ್ನು ಸಮರ್ಪಕವಾಗಿ ಬಳಸಬೇಕು. ಕೆಎಸ್‌ಆರ್‌ಪಿ ತುಕಡಿಗಳಿಗೆ ಸರಿಯಾದ ಮಾರ್ಗದರ್ಶನ ನೀಡಿ, ಅಗತ್ಯ ಸ್ಥಳಗಳಲ್ಲಿ ನಿಯೋಜಿಸುವುದರ ಜೊತೆಗೆ ರೂಟ್ ಮಾರ್ಚ್ ನಡೆಸಿ ಪೊಲೀಸ್ ಗಸ್ತು ಹೆಚ್ಚಿಸಬೇಕೆಂದು ಅವರು ಸೂಚನೆ ನೀಡಿ–ದರು.

ಗಣಪತಿ ಮೆರವಣಿಗೆ ಆಯೋಜಕರು ನಿಗದಿತ ಸಮಯವನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ನೋಡಿಕೊಳ್ಳಬೇಕು. ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಅಧಿಕಾರಿ ಮತ್ತು ಸಿಬ್ಬಂದಿ ಮುಂಚಿತವಾಗಿಯೇ ತಮ್ಮ ನಿಯೋಜಿತ ಸ್ಥಳ ಹಾಗೂ ಮೆರವಣಿಗೆ ಮಾರ್ಗವನ್ನು ಪರಿಶೀಲಿಸಿಕೊಳ್ಳುವುದರ ಜೊತೆಗೆ ಸ್ಥಳೀಯ ಪರಿಸ್ಥಿತಿಯ ಬಗ್ಗೆ ಸಂಪೂರ್ಣ ಅರಿವು ಹೊಂದಿರಬೇಕು ಎಂದು ಅವರು ಹೇಳಿದರು.

ಸಾರ್ವಜನಿಕರು, ಹಬ್ಬದ ಆಯೋಜ–ಕರು ಹಾಗೂ ಪೊಲೀಸ್ ಇಲಾಖೆ ನಡುವಿನ ಉತ್ತಮ ಸಮನ್ವಯದೊಂದಿಗೆ ಗಣೇಶ ಮೂರ್ತಿ ಪ್ರತಿಷ್ಠಾಪನಾ ಸ್ಥಳಗಳಲ್ಲಿ ಶಾಂತಿಯುತವಾಗಿ, ಸುರಕ್ಷಿತವಾಗಿ ಹಾಗೂ ಸೌಹಾರ್ದತೆಯಿಂದ ಆಚರಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಆಯುಕ್ತರು ಸೂಚನೆ ನೀಡಿದರು. ಈಶಾನ್ಯ ವಿಭಾಗದ ಡಿಸಿಪಿ ಕಚೇರಿಯಲ್ಲಿ ಆಯುಕ್ತರು ಸಭೆ ನಡೆಸಿ, ಕೆಲವು ಸಲಹೆ–ಸೂಚನೆಗಳನ್ನು ನೀಡಿದ್ದಾರೆ.

# ಮದ್ದೂರು ಗಣೇಶೋತ್ಸವ ವಿವಾದ : ಸರ್ಕಾರದ ವಿರುದ್ಧ ಆರ್.ಅಶೋಕ್ ವಾಗ್ದಾಳಿ

"ಮುಂಜಾನೆಯ ಮೆರಗು"

ಮದ್ದೂರು,ಸೆ.16– ಗಣೇಶ ವಿಸರ್ಜನೆ ಮೆರವಣಿಗೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಮತ್ತು ಪ್ರತಿಪಕ್ಷ ಬಿಜೆಪಿ ನಡುವೆ ರಾಜಕೀಯ ವಾಕ್ಸಮರ ತೀವ್ರಗೊಂಡಿದೆ. ಮದ್ದೂರಿನಲ್ಲಿ ಮಾತನಾಡಿದ ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ್, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರದ ವಿರುದ್ಧ ಆರೋಪಗಳನ್ನು ಮಾಡಿ, ಗಣೇಶೋತ್ಸವ ಮೆರವಣಿಗೆಗಳ ವಿಚಾರದಲ್ಲಿ ಹಿಂದೂಗಳಿಗೆ ನಿರ್ಬಂಧ ವಿಧಿಸಲಾಗುತ್ತಿದೆ ಎಂದು ಆಕ್ಷೇಪಿಸಿದರು.

ಹಿಂದೂಗಳ ಧಾರ್ಮಿಕ ಆಚರಣೆಗಳಿಗೆ ಸರ್ಕಾರ ಅಡ್ಡಿಪಡಿಸಬಾರದು. ರಾಜ್ಯ ಸರ್ಕಾರ ತಾಲಿಬಾನ್ ಸರ್ಕಾರ ಎಂದು ಆರೋಪಿಸಿ ಡಿಕೆಶಿ ಮಾಡುತ್ತಿರುವುದು ಡೋಂಗಿ ಹಿಂದುತ್ವ ಎಂದು ಟೀಕಿಸಿದರು. ಇತ್ತೀಚೆಗೆ ಮೈಸೂರು ಜಿಲ್ಲೆಯ ತೀ.ನರಸೀಪುರದಲ್ಲಿ ಪೊಲೀಸ್ ಅಧಿಕಾರಿಯೊಬ್ಬರು ಮಸೀದಿ ಬಳಿ ಮೆರವಣಿಗೆ ಮತ್ತು ಪಟಾಕಿ ಸಿಡಿಸುವ ವಿಚಾರದಲ್ಲಿ ಸಂಘಟಕರಿಗೆ ಎಚ್ಚರಿಕೆ ನೀಡಿದ ಘಟನೆ ರಾಜಕೀಯ ಚರ್ಚೆಗೆ ಕಾರಣವಾಗಿತ್ತು. ಈ ಹಿನ್ನೆಲೆಯಲ್ಲಿ ಬಿಜೆಪಿ ಸರ್ಕಾರದ ಕ್ರಮವನ್ನು ಪ್ರಶ್ನಿಸಿದೆ.

ಮಸೀದಿ ಮುಂದೆ ಗಣೇಶ ಮೆರವಣಿಗೆ ಹೋಗಲು ಅವಕಾಶ ಇಲ್ಲ ಎಂದು ಆದೇಶ ಹೊರಡಿಸಿ ಎಂದು ಡಿ.ಕೆ.ಶಿವಕುಮಾರ್ ಅವರಿಗೆ ಸವಾಲು ಹಾಕಿದ ಅಶೋಕ್, ಇದೇ ರೀತಿಯಲ್ಲಿ ಹಿಂದೂ ದೇವಸ್ಥಾನಗಳ ಮುಂದೆ ಇತರ ಧಾರ್ಮಿಕ ಮೆರವಣಿಗೆಗಳಿಗೂ ನಿರ್ಬಂಧ ವಿಧಿಸುವಂತೆ ಪ್ರಶ್ನಿಸಿದರು. ಹಿಂದೂಗಳು ಮಾತ್ರ ಮಸೀದಿ ಮುಂದೆ ಹೋಗಬಾರದಾ? ಎಂದು ಪ್ರಶ್ನಿಸಿದರು.

ಆಜಾನ್‌ಗಾಗಿ ಧ್ವನಿವರ್ಧಕ ಬಳಕೆ–ಯ ಬಗ್ಗೆ ಪ್ರಸ್ತಾಪಿಸಿದ ಅಶೋಕ್, ಗಣೇಶೋತ್ಸವವು ವರ್ಷದಲ್ಲಿ ಒಂದು ಬಾರಿ ನಡೆಯುವ ಆಚರಣೆಯಾಗಿದ್ದು, ಮೆರವಣಿಗೆಯಲ್ಲಿ ಧ್ವನಿವರ್ಧಕ ಬಳಸುವುದನ್ನು ವಿರೋಧಿಸುವುದು ಸರಿಯಲ್ಲ ಎಂದು ವಾದಿಸಿದರು. ಜುಟ್ಟುಡಿಕೆಶಿ ನಾಮ ಹಾಕಿದರೆ ಹಿಂದೂ ಆಗುವುದಿಲ್ಲ; ಚುನಾವಣೆಯಲ್ಲಿ ಮಾತ್ರ ಡೋಂಗಿ ಹಿಂದುತ್ವ ನಡೆಯುತ್ತದೆ ಎಂದು ಟೀಕಿಸಿದರು.

ಗಣೇಶೋತ್ಸವ ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗದೆ, ಹಿಂದೂ ಸಮಾಜದಲ್ಲಿ ಒಗ್ಗಟ್ಟು ಮತ್ತು ಹಿಂದುತ್ವದ ಬಗ್ಗೆ ಜಾಗೃತಿ ಮೂಡಿಸುವ ಸಾರ್ವಜನಿಕ ಉತ್ಸವವಾಗಬೇಕು ಎಂದು ಬಿಜೆಪಿ ನಾಯಕ ಸಿ.ಟಿ. ರವಿ ಹೇಳಿದ್ದಾರೆ.

ಮದ್ದೂರಿನಲ್ಲಿ ಗಣೇಶೋತ್ಸವ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಮಾತನಾಡಿದ ಅವರು, ಹಿಂದುತ್ವ ದುರ್ಬಲವಾದರೆ ರಾಷ್ಟ್ರ ದುರ್ಬಲವಾಗುತ್ತದೆ. ಹಿಂದೂ ದುರ್ಬಲನಾದರೆ ಸಂವಿಧಾನ ಉಳಿಯುವುದಿಲ್ಲ. ದೇಶದಲ್ಲಿ ಜಾತ್ಯತೀತತೆ ಸತ್ತುಹೋಗುತ್ತದೆ ಎಂದು ಅಭಿಪ್ರಾಯಪಟ್ಟರು.







ಗಣೇಶೋತ್ಸವ ಕೇವಲ ಕಡುಬು ತಿನ್ನುವ ಅಥವಾ ಪೂಜೆ ಮಾಡುವ ಕಾರ್ಯಕ್ರಮವಾಗಿರದೆ, ಹಿಂದೂ ಸಮಾಜದ ಒಗ್ಗಟ್ಟನ್ನು ಪ್ರತಿಬಿಂಬಿಸುವ ಉತ್ಸವವಾಗಬೇಕು ಎಂದರು.

ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, 108 ಗಣೇಶ ಮೂರ್ತಿಗಳ ಮೆರವಣಿಗೆ ನಡೆಯುತ್ತಿರುವುದು ಸಂತೋಷದ ವಿಚಾರ. ಆದರೆ ಕಳೆದ ಬಾರಿ ನಡೆದಂತಹ ಕಲ್ಲು ತೂರಾಟ ಹಾಗೂ ಗಲಭೆಯ ಘಟನೆಗಳು ಈ ಬಾರಿ ಯಾವುದೇ ಕಾರಣಕ್ಕೂ ಮರುಕಳಿಸಬಾರದು ಎಂದು ಹೇಳಿದರು.

ಕಳೆದ ವರ್ಷದ ಘಟನೆಯಲ್ಲಿ ಕಲ್ಲು ತೂರಾಟ ನಡೆದ ಬಳಿಕ ಪರಿಸ್ಥಿತಿ ಉದ್ವಿಗ್ನಗೊಂಡಿತ್ತು. ಪ್ರತಿಭಟನೆಗಳು ನಡೆದಿದ್ದವು ಹಾಗೂ ಪೊಲೀಸರು ಪರಿಸ್ಥಿತಿ ನಿಯಂತ್ರಿಸಲು ಲಾಠಿಚಾರ್ಜ್ ನಡೆಸಿದ್ದರು. ಘಟನೆಯ ಹಿನ್ನೆಲೆಯಲ್ಲಿ ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹವೂ ಕೇಳಿಬಂದಿತ್ತು. ತಪ್ಪಿತಸ್ಥರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಛಲವಾದಿ ನಾರಾಯಣಸ್ವಾಮಿ ಆರೋಪಿಸಿದರು.

ಗಣೇಶ ಮೆರವಣಿಗೆಗೆ ಸರ್ಕಾರ ಹಲವು ಷರತ್ತುಗಳನ್ನು ವಿಧಿಸಿರುವುದನ್ನೂ ಪ್ರಶ್ನಿಸಿರುವ ಅವರು, ಸರ್ಕಾರ ಹಿಂದುತ್ವದ ವಿರೋಧಿ ಧೋರಣೆ ಅನುಸರಿಸುತ್ತಿದೆ ಎಂಬುದು ತಮ ಆರೋಪ ಎಂದು ಹೇಳಿದ ಅವರು, ಗಣೇಶೋತ್ಸವದಂತಹ ಧಾರ್ಮಿಕ ಆಚರಣೆಗಳಿಗೆ ಅತಿಯಾದ ನಿರ್ಬಂಧ ವಿಧಿಸುವ ಬದಲು ಎಲ್ಲರಿಗೂ ಸಮಾನ ಅವಕಾಶ ಮತ್ತು ಸುರಕ್ಷತೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

# ಗ್ರಾಮ ಪಂಚಾಯಿತಿ ಕಚೇರಿಯೊಳಗೇ ಹಾಡಹಗಲೇ ತಂದೆ–ಮಗಳ ಭೀಕರ ಹತ್ಯೆ

"ಮುಂಜಾನೆಯ ಮೆರಗು"

**ಬೆಂಗಳೂರು,ಸೆ.16–** ಹಾಡಹಗಲೇ ಗ್ರಾಮ ಪಂಚಾಯಿತಿ ಕಚೇರಿಯೊಳಗೆ ತಂದೆ, ಮಗಳನ್ನೇ ಭೀಕರವಾಗಿ ಕೊಲೆ ಮಾಡಿರುವ ಹೃದಯವಿದ್ರಾವಕ ಘಟನೆ ಬೆಳಗಾವಿ ಜಿಲ್ಲೆ ಕಿತ್ತೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಕೊಲೆಯಾದವರನ್ನು ಮಾಜಿ ಯೋಧ ರುದ್ರಪ್ಪ ಕುಂದರಗಿ(67) ಮತ್ತು ಪುತ್ರಿ ಶಶಿಕಲಾ (26) ಎಂದು ಗುರುತಿಸಲಾಗಿದೆ.



ಕಿತ್ತೂರು ತಾಲ್ಲೂಕಿನ ಅವರಾದಿ ಗ್ರಾಮ ಪಂಚಾಯಿತಿ ಕಚೇರಿಗೆ ಇಂದು ಬೆಳಗ್ಗೆ ರುದ್ರಪ್ಪ ಅವರು ಮಗಳೊಂದಿಗೆ ಹೋಗಿರುವ ವಿಷಯ ತಿಳಿದು ಸ್ಥಳಕ್ಕೆ ಬಂದ ದುಷ್ಕರ್ಮಿಗಳು ರುದ್ರಪ್ಪ ಅವರ ಮೇಲೆ ಮಾರಕಾಸ್ತ್ರದಿಂದ ದಾಳಿ ಮಾಡಿದಾಗ ಮಗಳು ಶಶಿಕಲಾ ತಡೆಯಲು ಮಧ್ಯೆ ಬಂದಿದ್ದಾಳೆ. ಆ ಸಂದರ್ಭದಲ್ಲಿ ಆಕೆಯ ಮೇಲೂ ಕುಡುಗೋಲಿನಿಂದ ದಾಳಿ ಮಾಡಿ ಜಡೆ ಕತ್ತರಿಸಿ ಮನಬಂದಂತೆ ಕೊಚ್ಚಿ ತಂದೆ, ಮಗಳನ್ನು ಭೀಕರವಾಗಿ ಕೊಲೆ ಮಾಡಿ ಪರಾರಿಯಾಗಿದ್ದಾ–ರೆ. ಸುದ್ದಿ ತಿಳಿಯುತ್ತಿದ್ದಂತೆ ಕಿತ್ತೂರು ಠಾಣೆ ಪೊಲೀಸರು ಸ್ಥಳಕ್ಕೆ ದೌಡಾಯಿಸಿ ಪರಿಶೀಲನೆ ನಡೆಸಿದ್ದಾರೆ.

ಆಸ್ತಿ ವಿಚಾರವಾಗಿ ರುದ್ರಪ್ಪ ಮತ್ತು ಅವರ ಸಹೋದರರ ನಡುವೆ ಜಗಳವಾಗುತ್ತಿತ್ತು.ಈ ವಿಚಾರಕ್ಕೆ ಜೋಡಿ ಕೊಲೆ ನಡೆದಿದೆ ಎಂಬುವುದು ಮೇಲ್ನೋಟಕ್ಕೆ ಕಂಡು ಬಂದಿದೆ. ಹಾಡಹಗಲೇ ನಡೆದಿರುವ ಜೋಡಿ ಕೊಲೆಗೆ ಗ್ರಾಮದ ಜನರು ಬೆಚ್ಚಿಬಿದ್ದಿದ್ದಾರೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ದುಷ್ಕರ್ಮಿಗಳಿಗಾಗಿ ಬಲೆ ಬೀಸಿದ್ದಾರೆ.

# ಕಾವೇರಿ ನೀರಾವರಿ ನಿಗಮ ಸಭೆಯಲ್ಲಿ ಅಧಿಕಾರಿಗಳಿಗೆ ಚಾಟಿ ಬೀಸಿದ ಸಚಿವ ಚಲುವರಾಯಸ್ವಾಮಿ

"ಮುಂಜಾನೆಯ ಮೆರಗು"

**ಬೆಂಗಳೂರು.ಸೆ. 16–** ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಯಲ್ಲಿನ ಯೋಜನೆಗಳು, ಕುಡಿಯುವ ನೀರಿನ ಸಮಸ್ಯೆ ಹಾಗೂ ಮೇಕೆದಾಟು ಯೋಜನೆ ಕುರಿತಂತೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸದೆ ಕಾರ್ಯೋನ್ಮುಖರಾಗಬೇಕು. ಹವಾನಿಯಂತ್ರಿತ (ಎಸಿ) ಕೊಠಡಿಯಲ್ಲಿ ಕುಳಿತು ಲೆಕ್ಕಾಚಾರ ಹಾಕುವ ಬದಲು, ನೇರವಾಗಿ ಫೀಲ್ಡಿಗಿಳಿದು ರೈತರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಕೆಲಸ ಮಾಡದ ಅಧಿಕಾರಿಗಳನ್ನು ನಿರ್ದಾಕ್ಷಿಣ್ಯವಾಗಿ ಅಮಾನತು ಮಾಡಲಾಗುವುದು ಎಂದು ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಕಟ್ಟುನಿಟ್ಟಿನ ಎಚ್ಚರಿ–ಕೆ ನೀಡಿದ್ದಾರೆ.ಬೆಂಗಳೂರಿನ ಕೃಷ್ಣಾ ಭಾಗ್ಯ ಜಲ ನಿಗಮದ ಸಭಾಂಗಣದಲ್ಲಿ ಇಂದು ಕಾವೇರಿ ನೀರಾವರಿ ನಿಗಮದ (ಸಿಎನ್‌ಎನ್) ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

**ಡ್ಯಾಂ ನಿರ್ವಹಣೆ ಮತ್ತು ಜೀರ್ಣೋದ್ಧಾರ**

ರಾಜ್ಯದ ಡ್ಯಾಂಗಳಲ್ಲಿನ ನೀರಿನ ಪ್ರಮಾಣ, ಡೆಡ್ ಸ್ಟೋರೇಜ್, ತಮಿಳುನಾಡಿಗೆ ಹರಿಸಿದ ಹಾಗೂ ಬಿಳಿಗುಂಡ್ಲುವಿನಲ್ಲಿ ದಾಖಲಾದ ನೀರಿನ ಪ್ರಮಾಣ, ಅಚ್ಚುಕಟ್ಟು ವ್ಯಾಪ್ತಿಯ ಪರಿಸ್ಥಿತಿ ಸೇರಿದಂತೆ ಪ್ರತಿಯೊಂದು ಮಾಹಿತಿಯನ್ನು ದಿನಕ್ಕೆ–ರೆಡು ಭಾರಿ ಕಡ್ಡಾಯವಾಗಿ ಒದಗಿಸುವಂತೆ ಸಚಿವರು ಸೂಚಿಸಿದರು.

ಬೇಸಿಗೆ ಮುಗಿಯುವವರೆಗೂ ಕುಡಿಯುವ ನೀರಿಗೆ ಯಾವುದೇ ತೊಂದ–ರೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ನಿಗಮದ ವ್ಯಾಪ್ತಿಗೆ ಸೇರುವ ಒಟ್ಟು 23 ಸಣ್ಣ ಅಣೆಕಟ್ಟುಗಳ ಪೈಕಿ ಮಂದಗೆರೆ ಹಾಗೂ ಹೇಮಗಿರಿ ಅಣೆಕಟ್ಟುಗಳು ಬರೋಬ್ಬರಿ 800 ವರ್ಷಗಳಷ್ಟು ಹಳೆಯದಾಗಿದ್ದು, ಶಿಥಿಲಾವಸ್ಥೆಯಲ್ಲಿವೆ. ತಕ್ಷಣವೇ ಇವುಗಳ ದುರಸ್ತಿಗೆ ಅಂದಾಜು ಪಟ್ಟಿ ಸಿದ್ಧಪಡಿಸಿ, ನೀರಿನ ಸೋರಿಕೆ ತಡೆಯಬೇಕು. ಜೊತೆಗೆ ಹೇಮಾವತಿ ನೀರನ್ನು ಕುಣಿಗಲ್ ಮಾರ್ಗವಾಗಿ ಹುಲಿಯೂರು ದುರ್ಗದವರೆಗೆ ಹರಿಸಲು ಬಾಕಿ ಇರುವ 32 ಕಿ.ಮೀ. ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ನಿರ್ದೇಶನ ನೀಡಿದರು.

**ಮೇಕೆದಾಟು ಯೋಜನೆಯೇ ಶಾಶ್ವತ ಪರಿಹಾರ**

ಬಹುನಿರೀಕ್ಷಿತ ಮೇಕೆದಾಟು ಯೋಜನೆ ಕುರಿತು ಮಾತನಾಡಿದ ಸಚಿವರು, ಕಳೆದ ಐದು ವರ್ಷಗಳಲ್ಲಿ ಸುಮಾರು 112.88 ಟಿಎಂಸಿ ಹೆಚ್ಚುವರಿ ಕಾವೇರಿ ನೀರು ಸಮುದ್ರ ಪಾಲಾಗಿದೆ. ಹೀಗಾಗಿ ಬರಗಾಲದಲ್ಲೂ ಎರಡು ರಾಜ್ಯಗಳಿಗೆ ಅನುಕೂಲವಾಗುವ ಹಾಗೂ ಕನಿಷ್ಠ 22 ಟಿಎಂಸಿ ಕುಡಿಯುವ ನೀರನ್ನು ಸಂಗ್ರಹಿಸುವ ನಿಟ್ಟಿನಲ್ಲಿ ಮೇಕೆದಾಟು ಯೋಜನೆಯೊಂದೇ ಶಾಶ್ವತ ಪರಿಹಾರವಾಗಿದೆ ಎಂದರು.



ತಮಿಳುನಾಡು ಕೇಳಿದ್ದ ನೀರಿನ ಹರಿವಿನ ಕುರಿತ ಪ್ರಶ್ನೆಗಳಿಗೆ ಎಸ್‌ಒಪಿ (SOP) ಕಳುಹಿಸುವ ಮೂಲಕ ಈಗಾಗಲೇ ಸಮರ್ಪಕ ಉತ್ತರ ನೀಡಿ ಗೊಂದಲ ಬಗೆಹರಿಸಲಾಗಿದೆ. ಕೇಂದ್ರ ಜಲ ಆಯೋಗವೂ (ಸಿಡಬ್ಲ್ಯುಸಿ) ಸಕಾರಾತ್ಮಕವಾಗಿ ಸ್ಪಂದಿಸಿದೆ. ಮುಖ್ಯಮಂತ್ರಿಗಳ ಮೂಲಕ ಕೇಂದ್ರ ಜಲಶಕ್ತಿ ಸಚಿವರನ್ನು ಭೇಟಿ ಮಾಡಿ, ರಾಜ್ಯದ ಎಲ್ಲಾ ಸಂಸದರ ಸಹಕಾರದೊಂದಿಗೆ ಪ್ರಧಾನಿಗಳಿಗೆ ಯೋಜನೆಯ ಲಾಭವನ್ನು ಮನವರಿಕೆ ಮಾಡಿಕೊಡಲಾಗುವುದು. ಮುಳುಗಡೆಯಾಗುವ ಪ್ರದೇಶಕ್ಕೆ ಪರ್ಯಾಯ ಭೂಮಿ ಸಿಕ್ಕ ತಕ್ಷಣ ಕಾಮಗಾರಿ ಆರಂಭಿಸಿ ಮೂರು ವರ್ಷದೊಳಗೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಇದಕ್ಕಾಗಿ ಯೋಜನೆಗೆ ಸಂಬಂಧಿಸಿದ ಎಲ್ಲ ದಾಖಲೆಗಳನ್ನು ತಕ್ಷಣ ಡಿಜಿಟಲೀಕರಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

**ಶಾಸಕರಿಗೆ ಸಮಾನ ಅನುದಾನ ಹಾಗೂ ಶ್ರೀರಂಗ ಏತ ನೀರಾವರಿ**

ಅಭಿವೃದ್ಧಿ ಕಾರ್ಯಗಳಲ್ಲಿ ತಾರತಮ್ಯ ಹೋಗಲಾಡಿಸುವ ನಿಟ್ಟಿನಲ್ಲಿ, ರಾಜ್ಯದ ಎಲ್ಲಾ ಶಾಸಕರಿಗೂ ಯಾವುದೇ ರಾಜಕೀಯ ಒತ್ತಡಗಳಿಗೆ ಮಣಿಯದೆ ಸಮಾನವಾಗಿ ತಲಾ ಎರಡರಿಂದ ಮೂರು ನೀರಾವರಿ ಕಾಮಗಾರಿಗಳನ್ನು ನೀಡಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಹಾರಂಗಿ ಹಾಗೂ ಕಬಿನಿ ವ್ಯಾಪ್ತಿಯ ಅಪೂರ್ಣ ಕಾಮಗಾರಿಗಳನ್ನು ಮುಗಿಸಬೇಕು. ಶ್ರೀರಂಗ ಏತ ನೀರಾವರಿ ಯೋಜನೆಗೆ ಈಗಾಗಲೇ ಖರ್ಚಾಗಿರುವ ಹಣವನ್ನು ಸದ್ಬಳಕೆ ಮಾಡಿಕೊಂಡು, ಎಕ್ಸ್‌ಪ್ರೆಸ್ ಕೆನಾಲ್ ಮೂಲಕ ಶೀಘ್ರವೇ ನೀರು ಹರಿಸಲು ಕ್ರಮಕೈಗೊಳ್ಳಬೇಕು. ಜನಪ್ರತಿನಿಧಿಗಳೊಂದಿಗೆ ಸೌಹಾರ್ದ ಮಾತುಕತೆ ನಡೆಸಿ ಯೋಜನೆಯ ಮಹತ್ವ ವಿವರಿಸುವಂತೆ ಹಾಗೂ ರಾಜಕೀಯ ಒತ್ತಡಗಳಿಗೆ ಮಣಿದು ಯೋಜನೆಗಳನ್ನು ಸ್ಥಗಿತಗೊಳಿಸಬಾರದು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

**ಪೊಲೀಸ್ ಭದ್ರತೆಯಲ್ಲಿ ಕೆರೆ ತುಂಬಿಸುವ ಕಾರ್ಯ**

ಒಟ್ಟು ನೀರಿನಲ್ಲಿ ಶೇಕಡಾ 20ರಷ್ಟನ್ನು ಕುಡಿಯುವ ನೀರಿಗಾಗಿಯೇ ಕಾಯ್ದಿರಿಸಬೇಕು. ತುಮಕೂರು, ಬಸರಾಳು, ನಾಗಮಂಗಲ ಭಾಗದ ಕೆರೆಗಳಿಗೆ ಮೂರು ದಿನಕ್ಕೊಮ್ಮೆ ನೀರು ಬಿಡಬೇಕು. ಅಗತ್ಯ ಬಿದ್ದರೆ ಪೊಲೀಸ್ ಭದ್ರತೆಯಲ್ಲಾದರೂ ಕೆರೆ–ಕಟ್ಟೆಗಳನ್ನು ತುಂಬಿಸಬೇಕು ಎಂದು ಖಡಕ್ ಸೂಚನೆ ನೀಡಿದರು.

**ಆಡಳಿತಾತ್ಮಕ ಸುಧಾರಣೆ; ಆರ್ಥಿಕ ನೆರವು**

ಡ್ಯಾಂಗಳ ಪುನಶ್ಚೇತನ ಹಾಗೂ ಅಗತ್ಯ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯೊಂದಿಗೆ ಪ್ರತ್ಯೇಕ ಸಭೆ ನಡೆಸಿ, ಪರಿಹಾರ ಒದಗಿಸಲು ಕ್ರಮ ವಹಿಸಲಾಗುವುದು ಎಂದು ಸಚಿವರು ತಿಳಿಸಿದರು.

ನಿಗಮದಲ್ಲಿ ಖಾಲಿ ಇರುವ ಶೇಕಡಾ 57ರಷ್ಟು ಹುದ್ದೆಗಳನ್ನು ಶೀಘ್ರವೇ ಭರ್ತಿ ಮಾಡುವುದಾಗಿ ಭರವಸೆ ನೀಡಿದ ಸಚಿವರು, ಎಲ್ಲ ನಿಗಮಗಳನ್ನು ಸೇರಿಸಿ ಜಲಸಂಪನ್ಮೂಲ ಸಚಿವರ ನಿಯಂತ್ರಣದಲ್ಲಿ ಕಮಿಷನರೇಟ್ ರಚಿಸುವ ಅಧಿಕಾರಿಗಳ ಅಭಿಪ್ರಾಯಕ್ಕೂ ಸಮ್ಮತಿ ಸೂಚಿಸಿದರು.

**ಕಾವೇರಿ ಜಲಾನಯನ ಪ್ರದೇಶದ ವಿಸ್ತಾರ**

ಒಟ್ಟು 11 ಜಿಲ್ಲೆಗಳಲ್ಲಿ 34,273 ಚದರ ಕಿ.ಮೀ. ವಿಸ್ತೀರ್ಣದಲ್ಲಿ ವ್ಯಾಪಿಸಿರುವ ಕಾವೇರಿ ಕಣಿವೆಯಲ್ಲಿ ನ್ಯಾಯಾಧಿಕರಣದ ತೀರ್ಪಿನಂತೆ 18.85 ಲಕ್ಷ ಎಕರೆ ಪ್ರದೇಶಕ್ಕೆ ನೀರಾವರಿ ಒದಗಿಸುವ ಗುರಿ ಹೊಂದಲಾಗಿದೆ. ಇದರಲ್ಲಿ ಬೃಹತ್ ಮತ್ತು ಮಧ್ಯಮ ನೀರಾವರಿಯಡಿ 15.55 ಲಕ್ಷ ಎಕರೆ ಹಾಗೂ ಸಣ್ಣ ನೀರಾವರಿಯಡಿ 3.30 ಲಕ್ಷ ಎಕರೆ ಪ್ರದೇಶ ಸೇರಿದೆ. ಈ ಎಲ್ಲಾ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವುದು, ಆಧುನೀಕರಣ ಮತ್ತು ನಿರ್ವಹಣೆ ಮಾಡುವುದು ಕಾವೇರಿ ನೀರಾವರಿ ನಿಗಮದ ಮುಖ್ಯ ಉದ್ದೇಶವಾಗಿದೆ. ಮುಖ್ಯಮಂತ್ರಿಗಳು ಹಾಗೂ ತಾವೇ ಕಾವೇರಿ ಜಲಾನಯನ ಪ್ರದೇಶದವರಾಗಿರುವುದರಿಂದ ಯಾವುದೇ ಕಾಮಗಾರಿಗಳು ಅಪೂರ್ಣವಾಗಬಾರದು ಎಂದು ಸಚಿವರು ಅಧಿಕಾರಿಗಳಿಗೆ ಎಚ್ಚರಿಸಿದರು. ಸಭೆಯಲ್ಲಿ ಸರ್ಕಾರದ ಕಾರ್ಯದರ್ಶಿ ಕುಲಕರ್ಣಿ, ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ್ ಸೇರಿದಂತೆ ನಿಗಮದ ಹಿರಿಯ ಎಂಜಿನಿಯರ್‌ಗಳು ಉಪಸ್ಥಿತರಿದ್ದರು.

# ಕ್ರೀಡಾಕೂಟಗಳು ಸ್ಪರ್ಧೆಯಾಗದೆ, ಹಬ್ಬದ ಸಂಭ್ರಮವಾಗಲಿ: ಶಾಸಕ ಬಿ. ದೇವೇಂದ್ರಪ್ಪ

"ಮುಂಜಾನೆಯ ಮೆರಗು"

**ಹರಪನಹಳ್ಳಿ ಸೆ, 16–** ಗ್ರಾಮೀಣ ಭಾಗಗಳಲ್ಲಿ ನಡೆಯುವ ಕ್ರೀಡಾಕೂಟಗಳು ಕೇವಲ ಗೆಲುವು–ಸೋಲಿನ ಸ್ಪರ್ಧೆಗಳಾಗದೆ, ಎಲ್ಲರೂ ಒಗ್ಗೂಡಿ ಸಂಭ್ರಮಿಸುವ ಹಬ್ಬದ ವಾತಾವರಣವನ್ನು ಸೃಷ್ಟಿಸಬೇಕು ಎಂದು ಶಾಸಕ ಬಿ. ದೇವೇಂದ್ರಪ್ಪ ಅಭಿಪ್ರಾಯಪಟ್ಟರು.

ವಿಧಾನಸಭಾ ಕ್ಷೇತ್ರದ ಮಾದಿಹಳ್ಳಿ ಗ್ರಾಮದಲ್ಲಿ ನಡೆದ ಉಚ್ಚಂಗಿದುಗ–'ರ್ಗ ವಲಯಮಟ್ಟದ ಪ್ರಾಥಮಿಕ ಶಾಲಾ ಹಂತದ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶಗಳಲ್ಲಿ ಗಣೇಶೋತ್ಸವ, ಜಾತ್ರೆ ಸೇರಿದಂತೆ ವಿವಿಧ ಹಬ್ಬಗಳನ್ನು ಜಾತಿ–ಮತ ಭೇದವಿಲ್ಲದೆ ಒಗ್ಗಟ್ಟಿನಿಂದ ಆಚರಿಸುವಂತೆ ಕ್ರೀಡಾಕೂಟಗಳಲ್ಲಿಯೂ ಎಲ್ಲ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಸೌಹಾರ್ದದಿಂದ ಪಾಲ್ಗೊಂಡು ಯಶಸ್ವಿಗೊಳಿಸಬೇಕು. ಕ್ರೀಡೆಗಳು ವಿದ್ಯಾರ್ಥಿಗಳಲ್ಲಿ ಶಿಸ್ತು, ಆತ್ಮವಿಶ್ವಾಸ, ನಾಯಕತ್ವ ಗುಣ ಹಾಗೂ ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಬೆಳೆಸುತ್ತವೆ ಎಂದರು.

ವಿದ್ಯಾರ್ಥಿಗಳು ತಮಗೆ ಆಸಕ್ತಿ ಇರುವ ಕ್ರೀಡೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ತಮ್ಮಲ್ಲಿರುವ ಸುಪ್ತ ಪ್ರತಿಭೆಯನ್ನು ಹೊರತರುವ ಪ್ರಯತ್ನ ಮಾಡಬೇಕು. ಕ್ರೀಡೆಗಳು ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಸದೃಢತೆಗೂ ಪೂರಕವಾಗಿವೆ. ಶಾಲಾ ಹಂತದಲ್ಲಿಯೇ ಪ್ರತಿಭೆಗಳನ್ನು ಗುರುತಿಸಿ ಸೂಕ್ತ ತರಬೇತಿ ನೀಡಿದರೆ ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುವ ಅವಕಾಶ ದೊರೆಯಲಿದೆ ಎಂದು ಹೇಳಿದರು.



**ತೀರ್ಪಿನಲ್ಲಿ ಪಾರದರ್ಶಕತೆ ಇರಲಿ**

ಕ್ರೀಡಾಕೂಟದಲ್ಲಿ ತೀರ್ಪುಗಾರರು ಯಾವುದೇ ಒತ್ತಡ, ಹಸ್ತಕ್ಷೇಪಕ್ಕೆ ಒಳಗಾಗದೆ ಪಾರದರ್ಶಕವಾಗಿ ತೀರ್ಪು ನೀಡಬೇಕು. ನೈಜ ಪ್ರತಿಭೆ ಹೊಂದಿರುವ ಕ್ರೀಡಾಪಟುಗಳನ್ನು ಗುರುತಿಸಿ ಮುಂದಿನ ಹಂತದ ಸ್ಪರ್ಧೆಗಳಿಗೆ ಆಯ್ಕೆ ಮಾಡುವ ಜವಾಬ್ದಾರಿ ತೀರ್ಪುಗಾರರ ಮೇಲಿದೆ ಎಂದು ಶಾಸಕ ದೇವೇಂದ್ರಪ್ಪ ಹೇಳಿದರು.

**2023ರ ಚುನಾವಣೆಯ ಕ್ರೀಡೆಯಲ್ಲಿ ಗೆದ್ದಿರುವೆ**

ಕ್ರೀಡೆಯನ್ನು ರಾಜಕೀಯದೊಂದಿಗೆ ಹೋಲಿಕೆ ಮಾಡಿದ ಶಾಸಕ ದೇವೇಂದ್ರಪ್ಪ, "2023ರಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಿ, ಚುನಾವಣೆ ಎಂಬ ಬೃಹತ್ ಮಟ್ಟದ ಕ್ರೀಡೆಯಲ್ಲಿ ಗೆಲುವು ಸಾಧಿಸಿ ಶಾಸಕನಾಗಿ ಆಯ್ಕೆಯಾಗಿದ್ದೇನೆ. ಕ್ಷೇತ್ರದ ಜನರು ನೀಡಿರುವ ಅವಕಾಶ ಹಾಗೂ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುವ ಮೂಲಕ ಶಿಕ್ಷಣ, ಆರೋಗ್ಯ, ಕುಡಿಯುವ ನೀರು, ರಸ್ತೆ ಸೇರಿದಂತೆ ಮೂಲಸೌಕರ್ಯಗಳ ಅಭಿವೃದ್ಧಿಗೆ ಆದ್ಯತೆ ನೀಡುತ್ತೇನೆ" ಎಂದು ಭರವಸೆ ನೀಡಿದರು.

**ತಲೆತಗ್ಗಿಸಿ ಪುಸ್ತಕ ಓದಿದರೆ ತಲೆ ಎತ್ತುವಂತೆ ಮಾಡುತ್ತದೆ**

ವಿದ್ಯಾರ್ಥಿಗಳು ಶಾಲಾ ದಿನಗಳಿಂದಲೇ ನಿರಂತರ ಅಧ್ಯಯನ ಹಾಗೂ ಅಭ್ಯಾಸಕ್ಕೆ ಹೆಚ್ಚಿನ ಒತ್ತು ನೀಡಬೇಕು. "ಪುಸ್ತಕವನ್ನು ತಲೆತಗ್ಗಿಸಿ ಓದಿದರೆ, ಜೀವನದಲ್ಲಿ ತಲೆ ಎತ್ತಿ ನಿಲ್ಲುವಂತೆ ಮಾಡುತ್ತದೆ" ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಡಾ. ಬಿ.ಆರ್. ಅಂಬೇಡ್ಕರ್ ಸೇರಿದಂತೆ ಮಹನೀಯರ ಆದರ್ಶಗಳನ್ನು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಇಂದಿನ ವಿದ್ಯಾರ್ಥಿಗಳೇ ಭವಿಷ್ಯದ ಭಾರತದ ನಿರ್ಮಾತೃಗಳಾಗಿದ್ದು, ಉತ್ತಮ ಶಿಕ್ಷಣ, ಶಿಸ್ತು ಮತ್ತು ಸಂಸ್ಕಾರ ಬೆಳೆಸಿಕೊಳ್ಳಬೇಕು ಎಂದರು.

ಇದೇ ವೇಳೆ 'ಗುಟ್ಟೊಂದ ಹೇಳುವೆ, ಪುಟಾಣಿ ಮಕ್ಕಳೇ' ಹಾಡಿನ ಮೂಲಕ ವಿದ್ಯಾರ್ಥಿಗಳನ್ನು ರಂಜಿಸಿದ ಅವರು, ಮಹಾತ್ಮ ಗಾಂಧಿ, ಜವಾಹರಲಾಲ್ ನೆಹರು ಸೇರಿದಂತೆ ದೇಶದ ಮಹನೀಯರಂತೆ ಭವಿಷ್ಯದಲ್ಲಿ ಸಾಧನೆ ಮಾಡುವ ಸಂಕಲ್ಪವನ್ನು ವಿದ್ಯಾರ್ಥಿಗಳು ಹೊಂದಬೇಕು ಎಂದು ಪ್ರೇರೇಪಿಸಿದರು.

**ಕ್ರೀಡಾಕೂಟಗಳಿಗೆ ಅನುದಾನ ನೀಡುವಂತೆ ಸಚಿವರ ಗಮನಕ್ಕೆ**

ರಾಜ್ಯವ್ಯಾಪಿ ಶಾಲಾ ಕ್ರೀಡಾಕೂಟಗಳಿಗೆ ಸಮರ್ಪಕ ಅನುದಾನ ದೊರೆಯದಿರುವುದರಿಂದ ಆಯೋಜಕ ಶಿಕ್ಷಕರು ಸ್ಥಳೀಯರಿಂದ ದೇಣಿಗೆ ಸಂಗ್ರಹಿಸಿ ಕ್ರೀಡಾಕೂಟದ ಖರ್ಚು–ವೆಚ್ಚಗಳನ್ನು ನಿರ್ವಹಿಸಬೇಕಾದ ಪರಿಸ್ಥಿತಿ ಇದೆ. ಇದರಿಂದ ಶಿಕ್ಷಕರ ಮೇಲೆ ಹೆಚ್ಚುವರಿ ಹೊರೆ ಬೀಳುತ್ತಿದೆ. ಈ ವಿಚಾರವನ್ನು ವಿಧಾನಸಭಾ ಅಧಿವೇಶನದ ಶೂನ್ಯ ವೇಳೆಯಲ್ಲಿ ಶಿಕ್ಷಣ ಸಚಿವರ ಗಮನಕ್ಕೆ ತಂದು, ಕ್ರೀಡಾಕೂಟಗಳಿಗೆ ಅಗತ್ಯ ಅನುದಾನ ಒದಗಿಸುವಂತೆ ಮನವಿ ಮಾಡುವುದಾಗಿ ಶಾಸಕ ಬಿ. ದೇವೇಂದ್ರಪ್ಪ ತಿಳಿಸಿದರು.

**ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗೂ ಆದ್ಯತೆ ಅಗತ್ಯ**

ನಿವೃತ್ತ ಶಿಕ್ಷಕ ಹಾಗೂ ಹಿರಿಯ ಮುಖಂಡ ಕೆ. ಚಂದ್ರಪ್ಪ ಮಾತನಾಡಿ, ಶಾಲಾ ಹಂತದಲ್ಲಿಯೇ ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೂ ಸಮಾನ ಆದ್ಯತೆ ನೀಡಬೇಕು. ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆ, ಸಂಗೀತ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಆಸಕ್ತಿ ಬೆಳೆಸಿಕೊಂಡು ಪ್ರತಿಭೆಯನ್ನು ಪ್ರದರ್ಶಿಸಬೇಕು. ವಿದ್ಯಾರ್ಥಿಗಳ ಸಾಧನೆಯಿಂದ ಶಾಲೆ ಹಾಗೂ ಪೋಷಕರಿಗೆ ಕೀರ್ತಿ ದೊರೆಯುತ್ತದೆ ಎಂದರು.

ದೈಹಿಕ ಶಿಕ್ಷಣ ಪರಿವೀಕ್ಷಕ ಷಣ್ಮುಖಪ್ಪ ಕ್ರೀಡಾಜ್ಯೋತಿ ಬೆಳಗಿಸಿ ಮಾತನಾಡಿ, ಕ್ರೀಡೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಕ್ರೀಡಾಸ್ಫೂರ್ತಿ ಹಾಗೂ ಶಿಸ್ತನ್ನು ಕಾಪಾಡಿಕೊಳ್ಳಬೇಕು. ಯಾವುದೇ ರೀತಿಯ ಹಸ್ತಕ್ಷೇಪಕ್ಕೆ ಅವಕಾಶ ನೀಡದೆ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ ಮುಂದಿನ ಹಂತಕ್ಕೆ ಕೊಂಡೊಯ್ಯಬೇಕು ಎಂದು ಹೇಳಿದರು.

ಸರ್ಕಾರಿ ಶಾಲೆಗಳ ಕಾರ್ಯಕ್ರಮಗಳು ಯಶಸ್ವಿಯಾಗಲು ಸ್ಥಳೀಯರ ಸಹಕಾರ ಮತ್ತು ಪ್ರೋತ್ಸಾಹ ಅತ್ಯಗತ್ಯ. ಮಾದಿಹಳ್ಳಿ ಗ್ರಾಮಸ್ಥರು ಕ್ರೀಡಾಕೂಟದ ಯಶಸ್ಸಿಗೆ ನೀಡಿದ ಸಹಕಾರವನ್ನು ಸ್ಮರಿಸಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಶಾಲಾ ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಶಿವಕುಮಾರ್, ಬಡ್ತಿ ಮುಖ್ಯಶಿಕ್ಷಕ ಎನ್. ನಾಗರಾಜ್, ಶಿಕ್ಷಕ ಬಿ. ಮಂಜುನಾಥ್, ಸಂಚಾಲಕ ಕೆ. ಶಿವಕುಮಾರ್, ಸಬ್‌ಇನ್ಸ್‌ಪೆಕ್ಟರ್ ವಿಜಯಕೃಷ್ಣ, ವೈದ್ಯಾಧಿಕಾರಿ ರಾಘವೇಂದ್ರ, ನಿವೃತ್ತ ಶಿಕ್ಷಕರಾದ ಸಿದ್ದಲಿಂಗನಗೌಡ, ಯು. ರೇವಣಸಿದ್ದಪ್ಪ, ಲೋಕಪ್ಪ, ಮುಖಂಡರಾದ ಬೊಮ್ಮಲಿಂಗಪ್ಪ, ಮೇಘರಾಜ್, ಬಸವನಗೌಡ, ಸುರೇಶ್, ಎಂ.ಕೆ. ಮಹಾದೇವಪ್ಪ, ವಕೀಲ ಗೋಣೇಶ್, ಶಿವಣ್ಣ, ಟಿ. ಅಂಜಿನಪ್ಪ, ಪತ್ರಕರ್ತ ಮಾದಿಹಳ್ಳಿ ಮಂಜುನಾಥ್, ನಿವೃತ್ತ ಸಮಾಜ ಕಲ್ಯಾಣ ಅಧಿಕಾರಿ ಮಹೇಶ್ವರಪ್ಪ ಸೇರಿದಂತೆ ಶಿಕ್ಷಕರು, ಪೋಷಕರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

**ಶಾಸಕರಿಂದ 50 ಸಾವಿರ ವೈಯಕ್ತಿಕ ದೇಣಿಗೆ**

ಇದೇ ಸಂದರ್ಭದಲ್ಲಿ ಶಾಸಕ ಬಿ. ದೇವೇಂದ್ರಪ್ಪ ಅವರು ಕ್ರೀಡಾಕೂಟದ ಆಯೋಜನೆಗೆ ವೈಯಕ್ತಿಕವಾಗಿ 50,000 ದೇಣಿಗೆ ನೀಡಿದರು. ಉಚ್ಚಂಗಿದುರ್ಗ ವಲಯಮಟ್ಟದ ಕ್ರೀಡಾಕೂಟದಲ್ಲಿ ಒಟ್ಟು 14 ಶಾಲೆಗಳ ವಿದ್ಯಾರ್ಥಿಗಳು ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಪಾಲ್ಗೊಂಡಿದ್ದರು.

# ಪಡಿತರ ಚೀಟಿ e-KYC ಗಡುವು ವಿಸ್ತರಿಸಿ: ಕರವೇ ಆಗ್ರಹ

"ಮುಂಜಾನೆಯ ಮೆರಗು"

**ಜಗಳೂರು, ಸೆ.16–** ಪಡಿತರ ಚೀಟಿಯ **e-KYC** ಮಾಡಿಸಲು ಸಾರ್ವಜನಿಕರು ಎದುರಿಸುತ್ತಿರುವ ತೊಂದರೆಗಳನ್ನು ನಿವಾರಿಸುವುದು, ಹೆಚ್ಚುವರಿ ಕಾಲಾವಕಾಶ ನೀಡುವುದು ಹಾಗೂ ಆಧಾರ್ ಕೇಂದ್ರಕ್ಕೆ ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜಿಸುವಂತೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ವತಿಯಿಂದ ಬುಧವಾರ ಪಟ್ಟಣದ ತಾಲ್ಲೂಕು ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಪ್ರತಿಭಟನಾಕಾರರು ತಾಲ್ಲೂಕು ಕಚೇರಿ ಎದುರು ಜಮಾಯಿಸಿ, ಸಾರ್ವಜನಿಕರಿಗೆ ಉಂಟಾಗುತ್ತಿರುವ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸುವಂತೆ ಒತ್ತಾಯಿಸಿದರು. ಬಳಿಕ ಗ್ರೇಡ್–2 ತಹಶೀಲ್ದಾರ್ ಪಾಲಯ್ಯ ಅವರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಕರವೇ ಅಧ್ಯಕ್ಷ ಎಂ.ವೈ. ಮಹಾಂತೇಶ್ ಮಾತನಾಡಿ, ಪಡಿತರ ಚೀಟಿಯ **e-KYC** ಸಂದರ್ಭದಲ್ಲಿ ಬೆರಳಚ್ಚು



ಹೊಂದಾಣಿಕೆಯಾಗದ ಕಾರಣ ಸಾರ್ವಜನಿಕರು ದಿನವಿಡೀ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ತಮ್ಮ ನಿತ್ಯದ ಕೆಲಸಗಳನ್ನು ಬದಿಗೊತ್ತಿ ಬೆಳಗಿನ ಜಾವ 3 ಗಂಟೆಯಿಂದಲೇ ಜನರು ಸರತಿ ಸಾಲಿನಲ್ಲಿ ನಿಲ್ಲುತ್ತಿರುವುದು ಕಂಡುಬರುತ್ತಿದೆ. ಕೆಲವರು ತಡರಾತ್ರಿವರೆಗೂ ಕಚೇರಿ ಆವರಣದಲ್ಲೇ ಊಟ ಮಾಡಿಕೊಂಡು ಕಾಯುವ ಪರಿಸ್ಥಿತಿ ಎದುರಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯನ್ನು ತಹಶೀಲ್ದಾರ್ ಅವರು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು, ಸಮಸ್ಯೆಗೆ ಶೀಘ್ರ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಆಧಾರ್ ಕೇಂದ್ರವು ಕೇಂದ್ರ ಸರ್ಕಾರದ ವ್ಯಾಪ್ತಿಗೆ ಒಳಪಡುವುದರಿಂದ ಸಾರ್ವಜನಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜಿಸಬೇಕು. ಅಲ್ಲದೆ, ಪಡಿತರ ಚೀಟಿಯ **e-KYC** ಪೂರ್ಣಗೊಳಿಸಲು ನಿಗದಿಪಡಿಸಿರುವ ಸೆಪ್ಟೆಂಬರ್ 30ರ ಗಡುವನ್ನು ವಿಸ್ತರಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕರವೇ ಮಹಿಳಾ ಘಟಕದ ಅಧ್ಯಕ್ಷೆ ಶಾಹೀನ ಬೇಗಂ, ಗೌರವಾಧ್ಯಕ್ಷ ಸಂಗೊಳ್ಳಿ ಸುರೇಶ್, ಉಪಾಧ್ಯಕ್ಷರಾದ ಆಫೀಜ್, ಕೆ.ಎಂ. ಜಗದೀಶ್, ಜಿಲ್ಲಾ ಸಾಮಾಜಿಕ ಜಾಲತಾಣ ಅಧ್ಯಕ್ಷ ಲಿಂಗರಾಜು, ತಾಲೂಕು ಸಾಮಾಜಿಕ ಜಾಲತಾಣ ಅಧ್ಯಕ್ಷ ಮೊಹಮ್ಮದ್ ಅಬ್ದುಲ್ ರಖೀಬ್ ಜೆ.ಎಫ್., ವಕೀಲ ಆರ್. ಓಬಳೇಶ್, ನಗರ ಘಟಕ ಅಧ್ಯಕ್ಷ ಮಂಜುನಾಥ್, ಯುವ ಘಟಕ ಅಧ್ಯಕ್ಷ ಶಿವಾಜಿ, ಪದಾಧಿಕಾರಿಗಳಾದ ಮುನ್ನ, ಶಿವಣ್ಣ ಬಂಗಾರಿಗುಡ್ಡ, ತಿಪ್ಪೇಸ್ವಾಮಿ, ಸುಭೇಂದ್ರ, ಆನಂದಗೌಡ, ಸತ್ಯಮೂರ್ತಿ, ಮಂಜುಳ, ಫರ್ಜಾನ, ಗಾಯತ್ರಿ ಎಂ., ಅನಿಲ್, ಹನುಮಂತ, ರಾಮಸ್ವಾಮಿ, ರಘು ಸೇರಿದಂತೆ ಇತರ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಮಾದಿಹಳ್ಳಿ–ಹೊಸಕೋಟೆ ನಡುವೆ ನಿರ್ಮಾಣಗೊಂಡ ಸೇತುವೆ ಕಾಮಗಾರಿ ಪರಿಶೀಲಿಸಿದ ಶಾಸಕ ದೇವೇಂದ್ರಪ್ಪ



"ಮುಂಜಾನೆಯ ಮೆರಗು"

**ಜಗಳೂರು, ಸೆ.16–** ವಿಧಾನಸಭಾ ಕ್ಷೇತ್ರದ ಮಾದಿಹಳ್ಳಿ ಹಾಗೂ ಹೊಸಕೋಟೆ ಗ್ರಾಮಗಳ ಮಧ್ಯೆ ಹಳ್ಳಕ್ಕೆ ನಿರ್ಮಾಣಗೊಂಡಿರುವ ಸೇತುವೆ ಕಾಮಗಾರಿಯನ್ನು ಶಾಸಕ ಬಿ. ದೇವೇಂದ್ರಪ್ಪ ಬುಧವಾರ ವೀಕ್ಷಿಸಿ, ಕಾಮಗಾರಿಯ ಗುಣಮಟ್ಟ ಹಾಗೂ ಪೂರ್ಣಗೊಂಡಿರುವ ಕಾಮಗಾರಿಯ ಕುರಿತು ಪರಿಶೀಲಿಸಿದರು.

ನಂತರ ಮಾತನಾಡಿದ ಶಾಸಕ ಬಿ. ದೇವೇಂದ್ರಪ್ಪ, ಕಲ್ಯಾಣ ಕರ್ನಾಟಕ ಕೆ–ಕೆಆರ್‌ಡಿಪಿ ಅನುದಾನದಡಿ 60 ಲಕ್ಷ ವೆಚ್ಚದಲ್ಲಿ ಸೇತುವೆ ನಿರ್ಮಿಸಲಾಗಿದೆ. ಮಳೆಗಾಲದಲ್ಲಿ ಹಳ್ಳ ತುಂಬಿ ಹರಿಯುತ್ತಿದ್ದ ಸಂದರ್ಭದಲ್ಲಿ ಮಾದಿಹಳ್ಳಿ–ಹೊಸಕೋಟೆ ಒಳಮಾರ್ಗದ ರಸ್ತೆ ಸಂಪರ್ಕ ಕಡಿತಗೊಳ್ಳುತ್ತಿತ್ತು. ಇದರಿಂದ ಗ್ರಾಮಸ್ಥರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದರು ಎಂದು ಹೇಳಿದರು.

ಈ ಮಾರ್ಗವನ್ನು ಪ್ರೌಢಶಾಲಾ ವಿದ್ಯಾರ್ಥಿಗಳು ಪ್ರತಿನಿತ್ಯ ಶಾಲೆಗೆ ತೆರಳಲು ಬಳಸುತ್ತಿದ್ದು, ಹಳ್ಳದಲ್ಲಿ ನೀರು ಹೆಚ್ಚಾದಾಗ ವಿದ್ಯಾರ್ಥಿಗಳ ಸಂಚಾರಕ್ಕೂ ತೊಂದರೆಯಾಗುತ್ತಿತ್ತು. ರೈತರು ತಮ್ಮ ಜಮೀನುಗಳಿಗೆ ತೆರಳಲು ಹಾಗೂ ಬೆಳೆ ಕಟಾವು ಸಂದರ್ಭದಲ್ಲಿ ಟ್ರ್ಯಾಕ್ಟರ್‌ಗಳ ಮೂಲಕ ಕೃಷಿ ಉತ್ಪನ್ನಗಳನ್ನು ಸಾಗಿಸಲು ಕೂಡ ತೀವ್ರ ಸಂಕಷ್ಟ ಎದುರಿಸುತ್ತಿದ್ದರು.

ಈ ಭಾಗದ ಗ್ರಾಮಸ್ಥರ ಬಹುದಿನಗಳ ಬೇಡಿಕೆಯನ್ನು ಪರಿಗಣಿಸಿ ಸುಸಜ್ಜಿತ ಹಾಗೂ ಗುಣಮಟ್ಟದ ಸೇತುವೆ ನಿರ್ಮಿಸಲಾಗಿದ್ದು, ಇದರಿಂದ ಮಳೆಗಾಲದಲ್ಲಿಯೂ ಗ್ರಾಮಗಳ ನಡುವಿನ ಸಂಪರ್ಕ ನಿರಂತರವಾಗಿರಲಿದೆ. ವಿದ್ಯಾರ್ಥಿಗಳು, ರೈತರು ಹಾಗೂ ಸಾರ್ವಜನಿಕರಿಗೆ ಅನುಕೂಲವಾಗಲಿದೆ ಎಂದು ಶಾಸಕ ಹೇಳಿದರು.

ಇದೇ ವೇಳೆ ಬೂದಿಹಾಳ್ ಹಳ್ಳದಲ್ಲಿಯೂ ಸುಮಾರು 2 ಕೋಟಿ ವೆಚ್ಚದಲ್ಲಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸಲಾಗಿದೆ. ಇಂತಹ ಮೂಲಸೌಕರ್ಯ ಕಾಮಗಾರಿಗಳ ಮೂಲಕ ಗ್ರಾಮೀಣ ಪ್ರದೇಶಗಳ ಸಂಪರ್ಕ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಕೆ. ಚಂದ್ರಪ್ಪ, ಕೆ. ಮೇಘರಾಜ್, ವಕೀಲ ಗೋಣೇಶ್, ಅಂಜಿನಪ್ಪ, ಬಸವನಗೌಡ, ಶಿವಣ್ಣ, ರವೀಂದ್ರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸೆ. 18 ರಂದು ಭದ್ರಾ ಮೇಲ್ದಂಡೆ ನೀರಾವರಿ ಯೋಜನೆ ಹೋರಾಟ ಸಮಿತಿಯಿಂದ ಸಭೆ

"ಮುಂಜಾನೆಯ ಮೆರಗು"

**ಜಗಳೂರು ಸೆ, 16–** ಭದ್ರಾ ಮೇಲ್ದಂಡೆ ನೀರಾವರಿ ಯೋಜನೆ: ಸೆ. 18ರಂದು ಕಲ್ಲೇದೇವರಪುರದಲ್ಲಿ ಮಹತ್ವದ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಭದ್ರ ಮೇಲ್ದಂಡೆ ನೀರಾವರಿ ಹೋರಾಟ ಸಮಿತಿ ಅಧ್ಯಕ್ಷ ತೋರಣಗಟ್ಟೆ ತಿಪ್ಪೇಸ್ವಾಮಿ ಮನವಿ ಮಾಡಿಕೊಂಡಿದ್ದಾರೆ.

ಈ ಸಂಭಂದಿಸಿದ ಪತ್ರಿಕೆಯೊಂದಿಗೆ ಮಾತನಾಡಿ ಶಾಶ್ವತ ಬರಪೀಡಿತ ಜಗಳೂರು ತಾಲೂಕಿಗೆ ಭದ್ರಾ ಮೇಲ್ದಂಡೆ ನೀರಾವರಿ ಯೋಜನೆಯ ನೀರು ಒದಗಿಸುವಲ್ಲಿ ಸರ್ಕಾರದ ವಿಳಂಬ ನೀತಿಯನ್ನು ಖಂಡಿಸಿ ಹಾಗೂ ಮುಂದಿನ ಹೋರಾಟದ ರೂಪು–ರೇಷೆಗಳನ್ನು ಸಿದ್ಧಪಡಿಸಲು 'ಭದ್ರಾ ಮೇಲ್ದಂಡೆ ನೀರಾವರಿ ಹೋರಾಟ ಸಮಿತಿ'ಯಿಂದ ಸೆಪ್ಟೆಂಬರ್ 18, 2026 (ಶುಕ್ರವಾರ) ರಂದು ಬೆಳಿಗ್ಗೆ 11:00 ಗಂಟೆ–ಗೆ ಕಲ್ಲೇದೇವರಪುರದ ಶ್ರೀ ಕಲ್ಲೇಶ್ವರಸ್ವಾಮಿ ದೇವಸ್ಥಾನದಲ್ಲಿ ಸಾರ್ವಜನಿಕ ಸಭೆಯನ್ನು ಆಯೋಜಿಸಲಾಗಿದೆ.

**ಸರ್ಕಾರದ ನೆಪ, ಯೋಜನೆಯಲ್ಲಿ ವಿಳಂಬ:**

1969ರಲ್ಲಿ ಅಂದಿನ ಮುಖ್ಯಮಂತ್ರಿ ದಿವಂಗತ ಎಸ್. ನಿಜಲಿಂಗಪ್ಪನವರು ಜಗಳೂರು ತಾಲೂಕನ್ನು ಈ ಯೋಜನೆಗೆ ಸೇರ್ಪಡೆಗೊಳಿಸಿದ್ದರು. ಯೋಜನೆ ಪ್ರಾರಂಭವಾಗಿ 18 ವರ್ಷಗಳು ಕಳೆದರೂ ರೈತರಿಗೆ ನೀರು ತಲುಪಿಸುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಇತ್ತೀಚೆಗೆ ಪ್ರಾಯೋಗಿಕವಾಗಿ 114 ಕಿ.ಮೀ ವರೆಗೆ ಕಾಲುವೆ ಮೂಲಕ ನೀರು ಹರಿಸಲಾಗಿದ್ದರೂ, 114 ಕಿ.ಮೀ ನಿಂದ 136 ಕಿ.ಮೀ (ಜಗಳೂರು) ವರೆಗೆ ನೀರು ಹರಿಸಲು ಅಗತ್ಯವಿರುವ ಗೋನೂರು ಸಮೀಪದ ಅಕ್ವಾಡಕ್ಟ್ (ಜಲಸೇತುವೆ) ಕಾಮಗಾರಿ ಅಪೂರ್ಣಗೊಂಡಿದೆ. ಕೇಂದ್ರ ಸರ್ಕಾರದಿಂದ 5,300 ಕೋಟಿ ಅನುದಾನ ಬಿಡುಗಡೆಯಾಗಿಲ್ಲ ಎಂದು ನೆಪ ಹೇಳುತ್ತಾ ರಾಜ್ಯ ಸರ್ಕಾರ ರೈತರಿಗೆ ವಂಚಿಸುತ್ತಿದೆ.



ಪ್ರಸ್ತುತ ತಾಲೂಕು ವ್ಯಾಪ್ತಿಯಲ್ಲಿ ಶೇ. 34ರಷ್ಟು ಮಾತ್ರ ಕಾಮಗಾರಿ ಪೂರ್ಣಗೊಂಡಿದೆ.

**2.40 ಟಿ.ಎಂ.ಸಿ ನೀರು ಮತ್ತು ಸುದೀರ್ಘ ಹೋರಾಟ:**

2008 ರಿಂದ ಸತತ ಹೋರಾಟ ಹಾಗೂ ಹೈಕೋರ್ಟ್ ಆದೇಶದಂತೆ ತಾಲೂಕಿನ 9 ಕೆರೆಗಳು ಮತ್ತು 18,423 ಹೆಕ್ಟೇರ್ ಪ್ರದೇಶಕ್ಕೆ 2.40 ಟಿ.ಎಂ.ಸಿ ನೀರು ಕಾಯ್ದಿರಿಸಲಾಗಿತ್ತು. ಈ ಹಕ್ಕಿಗಾಗಿ ಧರಣಿ ಸತ್ಯಾಗ್ರಹ, ಜಗಳೂರು ಬಂದ್ ಹಾಗೂ ರಾಷ್ಟ್ರೀಯ ಹೆದ್ದಾರಿ ತಡೆಗಳಂತಹ ಹಲವು ಹೋರಾಟಗಳು ನಡೆದಿವೆ.

**ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮನವಿ:**

ತಾಲೂಕಿನ ನೀರಾವರಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಆಯೋಜಿಸಲಾಗಿರುವ ಈ ಸಭೆಯಲ್ಲಿ ಹೋರಾಟಗಾರರು, ರೈತ ಸಂಘಟನೆಗಳು, ವಿದ್ಯಾರ್ಥಿ, ಕನ್ನಡಪರ, ದಲಿತಪರ, ವಕೀಲರ ಮತ್ತು ಪತ್ರಕರ್ತರ ಸಂಘಟನೆಗಳು, ರಾಜಕೀಯ ಮುಖಂಡರು ಹಾಗೂ ರೈತ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಲಹೆ–ಸೂಚನೆಗಳನ್ನು ನೀಡಬೇಕಾಗಿ ಅವರು ಮನವಿ ಮಾಡಿಕೊಂಡಿದ್ದಾರೆ.

# ಬಿಳಿಚೋಡು ಠಾಣೆ ವ್ಯಾಪ್ತಿಯಲ್ಲಿ 99 ಗಣೇಶ ಮೂರ್ತಿಗಳ ವಿಸರ್ಜನೆ

"ಮುಂಜಾನೆಯ ಮೆರಗು"

**ಜಗಳೂರು ಸೆ, 16–** ತಾಲೂಕಿನ ಬಿಳಿಚೋಡು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಗಣೇಶೋತ್ಸವದ ಅಂಗವಾಗಿ ಬುಧವಾರ ಮೂರನೇ ದಿನವೂ ಗಣೇಶ ಮೂರ್ತಿಗಳ ವಿಸರ್ಜನಾ ಕಾರ್ಯ ಶಾಂತಿಯುತವಾಗಿ ನಡೆಯಿತು. ಒಟ್ಟು 99 ಗಣೇಶ ಮೂರ್ತಿಗಳನ್ನು ವಿವಿಧೆಡೆಗಳಿಂದ ಮೆರವಣಿಗೆಯ ಮೂಲಕ ಕರೆತಂದು ವಿಸರ್ಜಿಸಲಾಯಿತು.



ಸಂಜೆಯಿಂದಲೇ ವಿವಿಧ ಗ್ರಾಮಗಳು ಹಾಗೂ ಬಿಳಿಚೋಡು ಪಟ್ಟಣದ ಸುತ್ತಮುತ್ತಲಿನ ಗಣೇಶ ಪ್ರತಿಷ್ಠಾಪನಾ ಸ್ಥಳಗಳಿಂದ ಮೂರ್ತಿಗಳನ್ನು ಮೆರವಣಿಗೆಯಲ್ಲಿ ಕರೆತರಲಾಯಿತು. ಭಕ್ತರು ಗಣೇಶನಿಗೆ ಜಯಘೋಷ ಮೊಳಗಿಸುತ್ತಾ, ಸಾಂಪ್ರದಾಯಿಕ ವಾದ್ಯಗಳೊಂದಿಗೆ ಮೆರವಣಿಗೆಯಲ್ಲಿ ಪಾಲ್ಗೊಂಡರು.

ಈ ಬಾರಿ ಡಿಜೆ ಬಳಕೆಗೆ ನಿಯಂತ್ರಣವಿದ್ದ ಹಿನ್ನೆಲೆಯಲ್ಲಿ ಡಿಜೆ ಸದ್ದಿನ ಬದಲಿಗೆ ಡ್ರಮ್‌ಸೆಟ್ ಸೇರಿದಂತೆ ಸಾಂಪ್ರದಾಯಿಕ ವಾದ್ಯಗಳ ಶಬ್ದದ ನಡುವೆ ವಿಸರ್ಜನಾ ಕಾರ್ಯ ನಡೆಯಿತು. ಯುವಕರು ಹಾಗೂ ಭಕ್ತರು ಉತ್ಸಾಹದಿಂದ ಪಾಲ್ಗೊಂಡು ಗಣೇಶನಿಗೆ ಅಂತಿಮ ಪೂಜೆ ಸಲ್ಲಿಸಿ ಮೂರ್ತಿಗಳನ್ನು ಜಲಾಶಯಕ್ಕೆ ವಿಸರ್ಜಿಸಿದರು.

**ಎರಡು ಕಡೆ ವಿಸರ್ಜನೆಗೆ ವ್ಯವಸ್ಥೆ**

ಗಣೇಶ ಮೂರ್ತಿಗಳ ವಿಸರ್ಜನೆಗೆ ಅನುಕೂಲವಾಗುವಂತೆ ಬಿಳಿಚೋಡು ಪಟ್ಟಣದ ಕೆರೆ ಹಾಗೂ ಕೊಟ್ಟೂರು ರಸ್ತೆ ಬದಿಯ ಎರಡು ಸ್ಥಳಗಳಲ್ಲಿ ಪ್ರತ್ಯೇಕ ವ್ಯವಸ್ಥೆ ಕಲ್ಪಿಸಲಾಗಿತ್ತು. ಮೆರವಣಿಗೆಯಲ್ಲಿ ಯಾವುದೇ ಗೊಂದಲ ಉಂಟಾಗದಂತೆ ಪೊಲೀಸ್ ಸಿಬ್ಬಂದಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಸ್ಥಳದಲ್ಲಿದ್ದು, ವಿಸರ್ಜನಾ ಕಾರ್ಯವನ್ನು ಸುಗಮವಾಗಿ ನಡೆಸಿಕೊಟ್ಟರು.

**ಬಿಗಿ ಪೊಲೀಸ್ ಬಂದೋಬಸ್ತ್**

ಗಣೇಶ ವಿಸರ್ಜನಾ ಮೆರವಣಿಗೆಯ ಹಿನ್ನೆಲೆಯಲ್ಲಿ ಸಿಪಿಐ ನೂರ್ ಅಹಮದ್ ಅವರ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು. ಪ್ರಮುಖ ರಸ್ತೆ, ವಿಸರ್ಜನಾ ಸ್ಥಳ ಹಾಗೂ ಜನಸಂದಣಿ ಸೇರುವ ಪ್ರದೇಶಗಳಲ್ಲಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು.

ಮೆರವಣಿಗೆ ಸಂದರ್ಭದಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಸಂಚಾರ ವ್ಯವಸ್ಥೆಯ ಮೇಲೂ ನಿಗಾ ವಹಿಸಲಾಗಿತ್ತು. ಗಣೇಶೋತ್ಸವ ಶಾಂತಿಯುತವಾಗಿ ಹಾಗೂ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಪೊಲೀಸ್ ಇಲಾಖೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದರು.

# ಪಟ್ಟಣ ಪಂಚಾಯಿತಿಯಲ್ಲಿ ಪ್ರತಿಷ್ಠಾಪಿಸಿದ್ದ ಗಣೇಶ ಮೂರ್ತಿ ವಿಸರ್ಜನೆ

"ಮುಂಜಾನೆಯ ಮೆರಗು"

**ಜಗಳೂರು ಸೆ, 16–** ಪಟ್ಟಣ ಪಂಚಾಯಿತಿ ವತಿಯಿಂದ ಕಚೇರಿ ಆವರಣದಲ್ಲಿ ಪ್ರತಿಷ್ಠಾಪಿಸಲಾಗಿದ್ದ ಗಣೇಶ ಮೂರ್ತಿಯನ್ನು ಮೂರು ದಿನಗಳ ಪೂಜಾ ಕಾರ್ಯಕ್ರಮದ ಬಳಿಕ ಬುಧವಾರ ಭಕ್ತಿಭಾವದಿಂದ ವಿಸರ್ಜನೆ ಮಾಡಲಾಯಿತು.

ಪಟ್ಟಣ ಪಂಚಾಯಿತಿ ಆವರಣದಲ್ಲಿ ಗಣೇಶ ಚತುರ್ಥಿಯ ಅಂಗವಾಗಿ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ, ಮೂರು ದಿನಗಳ ಕಾಲ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಪಟ್ಟಣ ಪಂಚಾಯಿತಿ ಅಧಿಕಾರಿಗಳು, ಸಿಬ್ಬಂದಿ ಹಾಗೂ ಪೌರಕಾರ್ಮಿಕರು ಗಣೇಶೋತ್ಸವದಲ್ಲಿ ಪಾಲ್ಗೊಂಡು ವಿಶೇಷ ಪೂಜೆ ಸಲ್ಲಿಸಿದರು.

ಬುಧವಾರ ಪೂಜಾ ಕಾರ್ಯಕ್ರಮಗಳ ಬಳಿಕ ಗಣೇಶ ಮೂರ್ತಿಯನ್ನು ಮೆರವಣಿಗೆಯ ಮೂಲಕ ಪಟ್ಟಣದ ಕೆರೆಗೆ ಕೊಂಡೊಯ್ದು, ಸಂಪ್ರದಾಯಬದ್ಧವಾಗಿ ವಿಸರ್ಜನೆ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಪೌರಕಾರ್ಮಿಕರು ಹಾಗೂ ಪಟ್ಟಣ ಪಂಚಾಯಿತಿ ಸಿಬ್ಬಂದಿ ಪಾಲ್ಗೊಂಡಿದ್ದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ. ಲೋಕ್ಯಾನಾಯ್ಕ ಮಾತನಾಡಿ,



ಗಣೇಶೋತ್ಸವವು ಸಿಬ್ಬಂದಿ ಹಾಗೂ ಪೌರಕಾರ್ಮಿಕರಲ್ಲಿ ಒಗ್ಗಟ್ಟು ಮತ್ತು ಸೌಹಾರ್ದತೆ ಮೂಡಿಸುವುದರ ಜತೆಗೆ, ಪರಿಸರ ಸಂರಕ್ಷಣೆಯ ಜವಾಬ್ದಾರಿಯನ್ನೂ ನೆನಪಿಸುವಂತಾಗಿದೆ. ಗಣೇಶ ಮೂರ್ತಿ ವಿಸರ್ಜನೆ ಸಂದರ್ಭದಲ್ಲಿ ಸಾರ್ವಜನಿಕರು ಪರಿಸರಕ್ಕೆ ಹಾನಿಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಹೇಳಿದರು.

ಅಂಬೇಡ್ಕರ್ ಪುತ್ಥಳಿ ನಿರ್ಮಾಣ ಸಮಿತಿ ಅಧ್ಯಕ್ಷ ತುಪ್ಪದಹಳ್ಳಿ ಪೂಜಾರ್ ಸಿದ್ದಪ್ಪ ಮಾತನಾಡಿ, ಗಣೇಶೋತ್ಸವದಂತಹ ಧಾರ್ಮಿಕ ಆಚರಣೆಗಳು ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಹೋದರತ್ವದ ಭಾವನೆ ಬೆಳೆಸುವಂತಾಗಬೇಕು. ಎಲ್ಲರೂ ಒಗ್ಗಟ್ಟಿನಿಂದ ಹಬ್ಬಗಳನ್ನು ಆಚರಿಸುವ ಮೂಲಕ ಸಾಮಾಜಿಕ ಸಾಮರಸ್ಯಕ್ಕೆ ಒತ್ತು ನೀಡಬೇಕು ಎಂದು ತಿಳಿಸಿದರು.

ಪೌರಕಾರ್ಮಿಕರ ಸಂಘದ ತಾಲೂಕು ಅಧ್ಯಕ್ಷ ಚಿನ್ನಪ್ಪ ಮಾತನಾಡಿ, ಪಟ್ಟಣದ ಸ್ವಚ್ಛತೆ ಹಾಗೂ ಸಾರ್ವಜನಿಕ ಆರೋಗ್ಯ ಕಾಪಾಡುವಲ್ಲಿ ಪೌರಕಾರ್ಮಿಕರ ಪಾತ್ರ ಮಹತ್ವದ್ದಾಗಿದೆ. ಹಬ್ಬಗಳ ಸಂದರ್ಭದಲ್ಲಿ ಸಾರ್ವಜನಿಕರು ಸ್ವಚ್ಛತೆ ಕಾಪಾಡಲು ಸಹಕರಿಸಬೇಕು. ಗಣೇಶ ಮೂರ್ತಿ ವಿಸರ್ಜನೆ ನಂತರ ಕೆರೆ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಪೌರಕಾರ್ಮಿಕರು, ಸಿಬ್ಬಂದಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

